EMAIL : dairyadadaari@gmail.com ಸಂಪುಟ: 01 ಸಂಚಿಕೆ: 127
ಬೆಲೆ ರೂ : 2.00
ರಾಯಚೂರು
ಪುಟ: 4

ನಿಮ್ಮ ನಂಬಿಕೆಯ ಧ್ವನಿ
# ಧೈರ್ಯದ ದಾರಿ
DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ
Cell : 6360866626, 9036887793

KANNADA DAILY NEWS PAPER
ಕನ್ನಡ ದಿನಪತ್ರಿಕೆ

DAIRYADA DAARI
RNI NO: KNKAN/25/A2795 ಶನಿವಾರ: 25-04-2026

# ಕೈನಲ್ಲಿ ಬಣ ರಾಜಕೀಯ ಬಿರುಸು



**ಬೆಂಗಳೂರು, ಏ. 24–** ವಿವಿಧ ರಾಜ್ಯಗಳ ವಿಧಾನಸಭಾ ಚುನಾವಣೆಗಳು ನಡೆಯುತ್ತಿದ್ದಂತೆಯೇ ರಾಜ್ಯ ಕಾಂಗ್ರೆಸ್‌ನಲ್ಲೂ ಬಣ ರಾಜಕೀಯ, ಡಿನ್ನರ್ ಮೀಟಿಂಗ್, ದೆಹಲಿ ಯಾತ್ರೆ ಮತ್ತೆ ಮುನ್ನಲೆಗೆ ಬಂದಿದ್ದು, ಪಂಚರಾಜ್ಯಗಳ ಹಾಗೂ ರಾಜ್ಯದ ಉಪಚುನಾವಣೆಯ ಫಲಿತಾಂಶಗಳ ನಂತರ ಕಾಂಗ್ರೆಸ್‌ನಲ್ಲಿ ಬಣ ರಾಜಕೀಯ ಮತ್ತಷ್ಟು ಬಿರುಸಾಗುವ ಸಾಧ್ಯತೆ ಇದೆ.

ನಾಯಕತ್ವ ಬದಲಾವಣೆ, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ, ಸಂಪುಟ ಪುನಾರಚನೆ ಈ ಎಲ್ಲಾ ವಿಚಾರಗಳು ಈಗ ಕಾಂಗ್ರೆಸ್‌ನಲ್ಲಿ ಮತ್ತೆ ರಾಜಕೀಯ ಚಟುವಟಿಕೆಗಳಿಗೆ ಕಾರಣವಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ನಿನ್ನೆ ತಮ್ಮ ಆಪ್ತ ಸಚಿವರ ಜತೆ ಡಿನ್ನರ್ ಮೀಟಿಂಗ್ ನಡೆಸಿದ್ದರೆ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೆಹಲಿಗೆ ತೆರಳಿ ವರಿಷ್ಠರನ್ನು ಭೇಟಿ ಮಾಡಿರುವುದು ಕಾಂಗ್ರೆಸ್‌ನಲ್ಲಿ ಮುಂದೆ ರಾಜಕೀಯ ಕ್ರಾಂತಿಯನ್ನು ಸಂಕೇತಿಸಿವೆ. ರಾಜ್ಯದಲ್ಲಿ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಮುಗಿಯುತ್ತಿದ್ದಂತೆಯೇ ಕಾಂಗ್ರೆಸ್‌ನ 20ಕ್ಕೂ ಹೆಚ್ಚು ಹಿರಿಯ ಶಾಸಕರು ದೆಹಲಿ ಯಾತ್ರೆ ನಡೆಸಿ ದೆಹಲಿಯಲ್ಲೆ ಐದಾರು ದಿನ ಮೊಕ್ಕಾಂ ಹೂಡಿ ವರಿಷ್ಠರ ಮುಂದೆ ಸಂಪುಟ ಪುನಾರಚನೆಯ ಬೇಡಿಕೆ ಮಂಡಿಸಿದ್ದರು.

ಹಿರಿಯ ಶಾಸಕರ ಈ ಬೇಡಿಕೆಗೆ ಡಿಕೆಶಿ ಬಣದ ಶಾಸಕರಿಂದ ಅಸಮಾಧಾನ ವ್ಯಕ್ತವಾಗಿ ನಾಯಕತ್ವ ಬದಲಾವಣೆ ವಿಚಾರ ಇತ್ಯರ್ಥವಾಗದೆ ಸಂಪುಟ ಪುನಾರಚನೆ ತೀರ್ಮಾನ ಬೇಡ ಎಂದು ವರಿಷ್ಠರ ಮೇಲೆ ಒತ್ತಡ ಹೇರಲಾಗಿತ್ತು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬೆಂಗಳೂರಿನಲ್ಲಿ ಖುದ್ದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರನ್ನು ಭೇಟಿ ಮಾಡಿ ನಾಯಕತ್ವ ಬದಲಾವಣೆ ವಿಚಾರದಲ್ಲಿ ಒಂದು ನಿರ್ಧಾರಕ್ಕೆ ಬರುವಂತೆ ಮನವಿ ಮಾಡಿದ್ದರು. ಇದಾದ ಬಳಿಕ ಕಾಂಗ್ರೆಸ್‌ನಲ್ಲಿ ಬಣ ರಾಜಕೀಯ ಬಿರುಸು ಪಡೆದಿದ್ದು, ನಿನ್ನೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬೆಂಗಳೂರಿನ ಅಲಿಅಸ್ಕರ್ ರಸ್ತೆಯಲ್ಲಿರುವ ಸಚಿವ ಬೈರತಿ ಸುರೇಶ್ ರವರ ನಿವಾಸದಲ್ಲಿ ತಮ್ಮ ಆಪ್ತ ಸಚಿವರುಗಳ ಜತೆ ಡಿನ್ನರ್ ಮೀಟಿಂಗ್ ನಡೆಸಿ ಸಂಪುಟ ಪುನಾರಚನೆ, ಕೆಪಿಸಿಸಿ ಅಧ್ಯಕ್ಷಗಿರಿ, ಡಿ.ಕೆ. ಶಿವಕುಮಾರ್ ರವರ ದೆಹಲಿ ಯಾತ್ರೆ ಎಲ್ಲದರ ಬಗ್ಗೆಯೂ ಸುಮಾರು ಹೊತ್ತು ಚರ್ಚೆ ನಡೆಸಿದ್ದರು. ಸಚಿವರುಗಳಾದ ಡಾ. ಜಿ. ಪರಮೇಶ್ವರ್, ಬೈರತಿ ಸುರೇಶ್, ಜಮೀರ್ ಅಹಮದ್ ಖಾನ್, ಡಾ. ಹೆಚ್.ಸಿ. ಮಹದೇವಪ್ಪ ಇವರುಗಳು ಈ ಡಿನ್ನರ್ ಮೀಟಿಂಗ್‌ನಲ್ಲಿ ಭಾಗಿಯಾಗಿ ಮುಖ್ಯಮಂತ್ರಿಗಳ ಜತೆ ಮುಂದಿನ ರಾಜಕೀಯ ಆಗು ಹೋಗುಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಿದ್ದರು.

**ದೆಹಲಿಯಲ್ಲಿ ಡಿಕೆಶಿ ಮೊಕ್ಕಾಂ:** ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಆಪ್ತ ಸಚಿವರ ಜತೆ ಡಿನ್ನರ್ ಮೀಟಿಂಗ್ ನಡೆಸಿದ್ದ ಹೊತ್ತಿನಲ್ಲೇ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೆಹಲಿಯಲ್ಲಿ ಮೊಕ್ಕಾಂ ಹೂಡಿ ವರಿಷ್ಠರನ್ನು ಭೇಟಿ ಮಾಡಿ ತಮ್ಮ ಬೇಡಿಕೆ ಈಡೇರಿಕೆಗೆ ಪಟ್ಟು ಹಾಕಿದ್ದಾರೆ.ಹೈದರಾಬಾದ್‌ನಲ್ಲಿ ಕಾರ್ಯಕ್ರಮವೊಂದರಲ್ಲಿ ಪಾಲ್ಗೊಂಡು ನಿನ್ನೆ ರಾತ್ರಿಯೇ ದೆಹಲಿಗೆ ತೆರಳಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವರಿಷ್ಠರನ್ನು ಭೇಟಿ ಮಾಡಿ ನಾಯಕತ್ವ ವಿಚಾರ ಇತ್ಯರ್ಥಕ್ಕೆ ಪಟ್ಟು ಹಾಕಿದ್ದಾರೆ.ಇಂದು ಸಹ ದೆಹಲಿಯಲ್ಲೇ ಉಳಿದಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವರಿಷ್ಠರನ್ನು ಭೇಟಿ ಮಾಡಿ ಚರ್ಚೆ ನಡೆಸುವರು ಎಂದು ಹೇಳಲಾಗಿದೆ. ರಾಜ್ಯ ಕಾಂಗ್ರೆಸ್‌ನಲ್ಲಿ ಈಗ ನಡೆದಿರುವ ವಿದ್ಯಮಾನಗಳು ಮುಂದೆ ಕಾಂಗ್ರೆಸ್‌ನಲ್ಲಿ ರಾಜಕೀಯ ಕ್ರಾಂತಿಗೆ ಮುನ್ನುಡಿ ಎಂದು ಹೇಳಲಾಗುತ್ತಿದ್ದು, ಮೇ 4ರ ನಂತರ ರಾಜ್ಯ ಕಾಂಗ್ರೆಸ್‌ನಲ್ಲಿ ರಾಜಕೀಯ ಚಟುವಟಿಕೆಗಳು ಬಿರುಸಾಗಿ ನಾಯಕತ್ವ ಬದಲಾವಣೆ, ಸಂಪುಟ ಪುನಾರಚನೆ, ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ಸಂಬಂಧಿಸಿದಂತೆ ಚಟುವಟಿಕೆಗಳು ಬಿರುಸಾಗುವ ಸಾಧ್ಯತೆಗಳಿದ್ದು, ಮೇ ಮೊದಲನೇ ಮತ್ತು ಎರಡನೇ ವಾರದಲ್ಲಿ ವರಿಷ್ಠರು ರಾಜ್ಯ ಕಾಂಗ್ರೆಸ್‌ನ ಬೆಳವಣಿಗೆಗೆ ಸಂಬಂಧಿಸಿದಂತೆ ಎಲ್ಲಾ ಗೊಂದಲಗಳಿಗೂ ತೆರೆ ಎಳೆಯುವ ಸಂಬಂಧ ಒಂದು ನಿರ್ಧಾರ ಪ್ರಕಟಿಸುವ ಸಾಧ್ಯತೆಗಳು ಹೆಚ್ಚಿವೆ.

# ಅವಧಿಗೆ ಮುನ್ನ ಮುಂಗಾರು ಆಗಮನ



**ನವದೆಹಲಿ, ಏ.24:** ದೇಶದಾದ್ಯಂತ ಏಪ್ರಿಲ್ ಅಂತ್ಯದ ವೇಳೆಗೆ ಉಷ್ಣತೆ ತೀವ್ರಗೊಂಡಿರುವ ಹಿನ್ನೆಲೆಯಲ್ಲಿ, ಮುಂಗಾರು ಮಳೆ ಮುಂಚಿತವಾಗಿ ಆಗಮಿಸುವ ಸಾಧ್ಯತೆಗಳಿವೆ ಎಂಬ ಭರವಸೆಯ ಸುದ್ದಿ ಲಭ್ಯವಾಗಿದೆ. ಐಎಂಡಿ ಮಾಹಿತಿ ಪ್ರಕಾರ ಉತ್ತರ, ಮಧ್ಯ ಹಾಗೂ ಪೂರ್ವ ಭಾರತದ ಹಲವೆಡೆ ತಾಪಮಾನ 43-44 ಡಿಗ್ರಿ ಸೆಲ್ಸಿಯಸ್‌ವರೆಗೆ ಏರಿಕೆಯಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಏರಿಕೆಯಾಗುವ ಸಾಧ್ಯತೆ ಇದೆ.ಇದರ ನಡುವೆಯೇ ಇಸಿಎಂಡಬ್ಲ್ಯುಎಫ್ ನೀಡಿರುವ ತಾಜಾ ಮುನ್ಸೂಚನೆ ಪ್ರಕಾರ, ದಕ್ಷಿಣ-ಶ್ಚಿಮ ಮುಂಗಾರು ಈ ವರ್ಷ ಸಾಮಾನ್ಯ ಸಮಯಕ್ಕಿಂತ ಮುಂಚಿತವಾಗಿ ಪ್ರಾರಂಭವಾಗುವ ಸಾಧ್ಯತೆ ಇದೆ.

ಈ ಮುಂಗಾರು ಮೇ ತಿಂಗಳ ಕೊನೆಯ ಭಾಗದಲ್ಲೇ ದಕ್ಷಿಣ ಭಾರತಕ್ಕೆ ಪ್ರವೇಶಿಸಬಹುದು ಎಂದು ಅಂದಾಜಿಸಲಾಗಿದೆ. ಇದರಿಂದ ಬಿಸಿಲಿನಿಂದ ಕಂಗೆಟ್ಟ ಜನತೆಗೆ ತಾತ್ಕಾಲಿಕ ಪರಿಹಾರ ಸಿಗುವ ನಿರೀಕ್ಷೆ ಇದೆ. 2ನೇಪುಟಕ್ಕೆ

# ಡಾ.ರಾಜಕುಮಾರ್ ಅವರ ಸರಳತೆ ಜೀವನದಲ್ಲಿ ಅಳವಡಿಸಿಕೊಳ್ಳಿ: ತಹಶಿಲ್ದಾರ್ ಸುರೇಶ ವರ್ಮಾ



ಧೈರ್ಯದ ದಾರಿ

**ರಾಯಚೂರು:** ವರನಟ ಡಾ.ರಾಜಕುಮಾರ್ ಅವರು ಕರ್ನಾಟಕ ಮಾತ್ರವಲ್ಲದೇ ಇಡೀ ದೇಶದ ಹೆಮ್ಮೆಯಾಗಿದ್ದರು. ಅವರ ನಿಷ್ಠೆ, ಪ್ರಾಮಾಣಿಕತೆ, ಸರಳತೆಯನ್ನು ನಮ್ಮ ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ರಾಯಚೂರು ತಹಶಿಲ್ದಾರ್ ಸುರೇಶ ವರ್ಮಾ ಅವರು ಹೇಳಿದರು.

ಏಪ್ರಿಲ್ 24ರ ಶುಕ್ರವಾರ ದಂದು ನಗರದ ಕನ್ನಡ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ವರನಟ ಡಾ.ರಾಜಕುಮಾರ್ ಅವರ 97ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ರಾಜಕುಮಾರ್ ಅವರು ಕೇವಲ ಒಬ್ಬ ನಟ ಅಲ್ಲ. ಅವರು ಆದರ್ಶ ವ್ಯಕ್ತಿ ಯಾಗಿ ಕಾಣುತ್ತಾರೆ. ಗೋಕಾಕ ಚಳುವಳಿ ಮುಖಾಂತರ ಕನ್ನಡ ನಾಡಿಗೆ ಅವರು ಕೊಟ್ಟಂತಹ ಕೊಡುಗೆ ದೊಡ್ಡದು. ಮೇರು ನಟರಾಗಿದ್ದಾರೆ. ಅವರು, ಸಾಮಾಜಿಕ ಸಮಸ್ಯೆಗಳ ನಿವಾರಣೆಯ ಕಥಾಹಂದರದ ಹಲವಾರು ಚಲನಚಿತ್ರಗಳನ್ನು ನಮಗೆ ನೀಡಿದ್ದಾರೆ.

ಕನ್ನಡ ಅಭಿಮಾನವನ್ನು ತೋರಿದ್ದಾರೆ. ಅವರಂತೆ ನಾವೆಲ್ಲರೂ ನಾಡು-ನುಡಿಯ ಬಗ್ಗೆ ಅಭಿಮಾನವನ್ನು ಹೊಂದಬೇಕು. ಅವರ ಜೀವನದ ಸಾಮಾಜಿಕ ಕಾಳಜಿಯನ್ನು ಅರಿಯಬೇಕು. ಅಲ್ಲದೆ ಅವರ ಮಗನಾದ ಡಾ.ಪುನೀತ್ ರಾಜ್ ಕುಮಾರ್ ಅವರು ಸಹ ನಟನೆ ಸೇರಿದಂತೆ ಅನೇಕ ಸಾಮಾಜಿಕ ಕಾರ್ಯಗಳನ್ನು ಮಾಡಿದ್ದಾರೆ ಎಂದರು.

ವರನಟ ಡಾ.ರಾಜಕುಮಾರ್ ಅವರು ಸಾಮಾಜಿಕ ಸಂದೇಶ ಸಾರುವಂತಹ ಚಿತ್ರಗಳಲ್ಲಿ ನಟಿಸುವ ಮೂಲಕ ದಾದಾ ಸಾಹೇಬ್ ಫಾಲ್ಕೆ ಯಂತಹ ದೇಶದ ಅತ್ಯುನ್ನುತ ಅನೇಕ ಪ್ರಶಸ್ತಿಯನ್ನು ಪಡೆದುಕೊಂಡು ಕನ್ನಡಿಗರ ಮನೆ ಮಾತಾಗಿದ್ದಾರೆ. ಕನ್ನಡ ನಾಡು - ನುಡಿಯ ಅಸ್ಮಿತೆಯಾಗಿರುವ ಡಾ.ರಾಜಕುಮಾರ್ ಅವರು, ತಮ್ಮ ಚಲನಚಿತ್ರಗಳ ಮೂಲಕ ಸಮಾಜ ಸುಧಾರಣೆಗೆ ಅಪಾರ ಕೊಡುಗೆಯನ್ನು ನೀಡಿದ್ದಾರೆ ಎಂದರು.

ಕನ್ನಡ ಚಿತ್ರರಂಗವು ವಿಶ್ವದಲ್ಲೇ ಅತ್ಯಂತ ದೊಡ್ಡ ಮಟ್ಟದಲ್ಲಿ ಬೆಳೆಯಬೇಕು. ಎಂಬುದು ರಾಜಕುಮಾರ್ ಅವರ ಅಶೆಯವಾಗಿತ್ತು. ನಟನೆಯಲ್ಲಿ ತಮ್ಮನ್ನು ತಾವೇ ಮರೆತು ಹೋಗುತ್ತಿದ್ದರು. ಕರ್ನಾಟಕಕ್ಕೆ ಸಿಕ್ಕ ಮುತ್ತು ಅದಕ್ಕಾಗಿ ಅವರನ್ನು ಮುತ್ತು ರಾಜ್ ಎಂದು ಕರೆಯಲಾಗುತ್ತದೆ. ರಾಯಚೂರು ಕನ್ನಡ ಭಾಷೆಯ ತವರೂರು ಆಗಿದೆ.

ರಾಯಚೂರಿನಲ್ಲಿ ಕನ್ನಡವನ್ನು ಬೆಳಸೋಣ, ರಾಯಚೂರಿನಲ್ಲಿ ಕನ್ನಡವನ್ನು ಉಳಿಸಿ, ಬೆಳಸಲು ಎಲ್ಲರೂ ಶ್ರಮಿಸಬೇಕು ಎಂದರು.


ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಆರ್.ಗುರುನಾಥ ಅವರು ಮಾತನಾಡಿ, ಡಾ.ರಾಜ್‌ಕುಮಾರ್ ಅವರು ರಂಗಭೂಮಿಯಿಂದ ಬೆಳೆದು ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು. ಅವರನ್ನು ಅಭಿಮಾನಿಗಳು ಪ್ರೀತಿಯಿಂದ ಅಣ್ಣಾವ್ರು ಎಂದು ಕರೆದಿದ್ದಾರೆ. ಅವರಂತಹ ನಟನನ್ನು ಮತ್ತೆ ಕಾಣಲು ಸಾಧ್ಯವಿಲ್ಲ. ಡಾ.ರಾಜಣ್ಣ ಲಕ್ಷಾಂತರ ಅಭಿಮಾನಿಗಳನ್ನು ಹೊಂದಿದ್ದರು ಸಹ ಯಾವುದೇ ಪಕ್ಷದ ಜೊತೆಗೆ ಗುರುತಿಸಿಕೊಂಡಿಲ್ಲ. ಬಹುತೇಕ 2ನೇಪುಟಕ್ಕೆ

# ರಾಜ್ಯ ಮಟ್ಟದಲ್ಲಿ ರ್‍ಯಾಂಕ್ ಪಡೆದ ವಿದ್ಯಾರ್ಥಿಗೆ ಶಾಸಕರಿಂದ ಸನ್ಮಾನ

ಧೈರ್ಯದ ದಾರಿ

**ಮಾನ್ವಿ:** ಪಟ್ಟಣದಲ್ಲಿ ಶಾಸಕ ಹಂಪಯ್ಯನಾಯಕ ಬಿ.ವಿ.ಆರ್. ಅಂಗ್ಲಮಾಧ್ಯಮ ಪ್ರೌಡಶಾಲೆಯ ವಿದ್ಯಾರ್ಥಿ ಸುಖದೇವ ಎಸ್.ಎಸ್.ಎಲ್.ಸಿ, ವಾರ್ಷಿಕ ಪರೀಕ್ಷೆಯಲ್ಲಿ 625 ಅಂಕಗಳನ್ನು ಪಡೆಯುವ ಮೂಲಕ ರಾಜ್ಯಮಟ್ಟದಲ್ಲಿ ಸ್ಥಾನವನ್ನು ಪಡೆದಿರುವುದಕ್ಕೆ ಸನ್ಮಾನಿಸಿ ಅಭಿನಂದಿಸಿ ದೇಶಕ್ಕೆ ಇಂತಹ ಪ್ರತಿಭಾವಂತ ವಿದ್ಯಾರ್ಥಿಗಳ ಅಗತ್ಯ ಇದೆ ಜೀವನದಲ್ಲಿ ಇನ್ನು ಉತ್ತಮಸಾಧನೆಯನ್ನು ಮಾಡುವಂತೆ ಹಾರೈಸಿದರು.

ವಿದ್ಯಾರ್ಥಿ ತಂದೆ ಡಾ.ಪರಶುರಾಮ್.ತಾಯಿ ಚಂದ್ರಕಾಲ, ಬಿ.ವಿ.ಆರ್. ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಬಿ.ವಿ.ರೆಡ್ಡಿ, ಮುಖ್ಯಗುರು ಸರ್‌ಮಾತ್‌ಖಾನ್ ಸೇರಿದಂತೆ ಇನ್ನಿತರರು ಇದ್ದರು.



ಮಾನ್ವಿ: ಪಟ್ಟಣದಲ್ಲಿ ಎಸ್.ಎಸ್.ಎಲ್.ಸಿ, ವಾರ್ಷಿಕ ಪರೀಕ್ಷೆಯಲ್ಲಿ ರಾಜ್ಯಮಟ್ಟದ ರ್‍ಯಾಂಕ್ ಪಡೆದ ವಿದ್ಯಾರ್ಥಿ ಸುಖದೇವ ರವರನ್ನು ಶಾಸಕ ಹಂಪಯ್ಯನಾಯಕ ಸನ್ಮಾನಿಸಿ ಗೌರವಿಸಿದರು.

# ಗೆದ್ದೆನೆಂದು ಹಿಗ್ಗಬೇಡ, ಸೋತೆನೆಂದು ಕುಗ್ಗಬೇಡ: ರಮೇಶ್ ಭಂಡಾರಿ



ಧೈರ್ಯದ ದಾರಿ

**ಸಿರವಾರ:** "ಆಟದಲ್ಲಿ ಸೋಲು-ಗೆಲುವು ಸಹಜ. ಗೆದ್ದಾಗ ಅತಿಯಾಗಿ ಸಂಭ್ರಮಿಸದೆ ಮತ್ತು ಸೋತಾಗ ಕಂಗೆಡದೆ, ಕೇವಲ ಭಾಗವಹಿಸುವಿಕೆಯಲ್ಲಿ ಸಂತೋಷ ಕಾಣುವುದು ಕ್ರೀಡಾ ಮನೋಭಾವದ ಲಕ್ಷಣ," ಎಂದು ಸಾಮಾಜಿಕ ಕಾರ್ಯಕರ್ತ ರಮೇಶ್ ಭಂಡಾರಿ ಹೇಳಿದರು.

ರಾಯಚೂರು ಜಿಲ್ಲೆಯ ಸಿರವಾರ ತಾಲೂಕಿನ ಮಲ್ಲಟ್ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ 2025-26ನೇ ಸಾಲಿನ 6ನೇ ಸೀಸನ್ ಕ್ರಿಕೆಟ್ ಪಂದ್ಯಾವಳಿಯ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡುತ್ತಿದ್ದರು.

**ಗ್ರಾಮೀಣ ಕ್ರೀಡೆಗಳಿಗೆ ಯುವಕರ ಸಾಥ್**

ಮಲ್ಲಟ್ ಗ್ರಾಮದ ಯುವಕರು ಮತ್ತು ಗ್ರಾಮಸ್ಥರು ಸೇರಿ ಪ್ರತಿ ವರ್ಷದಂತೆ ಈ ವರ್ಷವೂ ಅತ್ಯಂತ ವ್ಯವಸ್ಥಿತವಾಗಿ ಪಂದ್ಯಾವಳಿಯನ್ನು ಆಯೋಜಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ರಮೇಶ್ ಭಂಡಾರಿಯವರು, "ಕ್ರಿಕೆಟ್ ಆರೋಗ್ಯಕ್ಕೆ ಉತ್ತಮ ತಾಲೀಮು. ಪ್ರತಿಯೊಬ್ಬರ ಜೀವನದಲ್ಲಿ ಆಟ ಮತ್ತು ಪಾಠ ಎರಡೂ ಅತಿ ಮುಖ್ಯ. ಗ್ರಾಮೀಣ ಕ್ರೀಡೆಗಳನ್ನು ಆಡುವುದರ ಮೂಲಕ ಅವುಗಳನ್ನು ಜೀವಂತವಾಗಿಡುವ ಕೆಲಸವನ್ನು ಇಂದಿನ ಯುವಕರು ಮಾಡುತ್ತಿರುವುದು ಶ್ಲಾಘನೀಯ," ಎಂದರು.

ದಾನಿಗಳ ಉದಾರತೆ

ಈ ಬಾರಿಯ ಪಂದ್ಯಾವಳಿಗೆ ಗ್ರಾಮದ ಪ್ರಮುಖರು ಆರ್ಥಿಕ ನೆರವು ನೀಡುವ ಮೂಲಕ ಕ್ರೀಡಾ ಪ್ರೋತ್ಸಾಹ ನೀಡಿದರು:

ಪ್ರಥಮ ಬಹುಮಾನ: 30,000 ಮೊತ್ತವನ್ನು ಮಾಜಿ ತಾಲೂಕು ಪಂಚಾಯತಿ ಸದಸ್ಯರಾದ ಮಲ್ಲಿಕಾರ್ಜುನ್ ವಾಲ್ಮೀಕಿ ಅವರು ನೀಡಿದರು.





**ದ್ವಿತೀಯ ಬಹುಮಾನ:** 20,000 ಮೊತ್ತವನ್ನು ಮಾಜಿ ಗ್ರಾಮ ಪಂಚಾಯತಿ ಸದಸ್ಯರಾದ ರವಿಕುಮಾರ್ ಅವರು ನೀಡಿದರು.

**ಊಟದ ವ್ಯವಸ್ಥೆ:** ಪಂದ್ಯಾವಳಿಯಲ್ಲಿ ಭಾಗವಹಿಸಿದ ಆಟಗಾರರಿಗೆ ಮತ್ತು ವೀಕ್ಷಿಸಲು ಬಂದಿದ್ದ ಕ್ರೀಡಾಭಿಮಾನಿಗಳಿಗೆ ನಾಗರಾಜ್ ಕಂಬಾರ್ ಅವರು ಭೋಜನದ ವ್ಯವಸ್ಥೆ ಮಾಡಿದ್ದರು.

"ಸೋಲು ಮತ್ತು ಗೆಲುವನ್ನು ಸಮಾನವಾಗಿ ಸ್ವೀಕರಿಸಿದಾಗ ಮಾತ್ರ ಸಮಾಜದಲ್ಲಿ ಸಮಾನತೆ ಉಳಿಯಲು ಸಾಧ್ಯ. ಸೋತರೂ ಗೆದ್ದರೂ ಅದೊಂದು ಹೊಸ ಅನುಭವ ನೀಡುತ್ತದೆ," ಎಂದು ರಮೇಶ್ ಭಂಡಾರಿ ಆಟಗಾರರಿಗೆ ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದವರು

ಈ ಕ್ರೀಡಾಕೂಟದ ಸಂದರ್ಭದಲ್ಲಿ ರಂಗನಾಥ್, ನಾಗರಾಜ್ ಕಂಬಾರ್, ನಾಯಕ್ ರಾಜಪ್ಪ ಮಲ್ಲಟ್, ರಾಘವೇಂದ್ರ ನಾಯಕ್, ರವಿಕುಮಾರ್ ಚಲವಾದಿ, ಬಸಪ್ಪ ಗೌಡ, ನಾಗರಾಜ್ ನಾಯಕ್, ಉದಯ್ ಗೌಡ, ಆಂಜನೇಯ ನಾಯಕ್, ಮಲ್ಲು ಭಂಡಾರಿ ಹಾಗೂ ಗ್ರಾಮದ ಹಿರಿಯರು ಮತ್ತು ನೂರಾರು ಯುವಕರು ಉಪಸ್ಥಿತರಿದ್ದರು.

# ಹಸಿರೆ ಉಸಿರು ಟ್ರಸ್ಟ್‌ನಿಂದ ಸಾಮಾಜಿಕ ಕಾರ್ಯ ವಿಸ್ತರಣೆ: ಹಸಿರೆ ಉಸಿರು ಆಶ್ರಮ ಉದ್ಘಾಟನೆ






ಧೈರ್ಯದ ದಾರಿ

**ಬೆಂಗಳೂರು:** ಏಪ್ರಿಲ್ 20 (ಸೋಮವಾರ)ಬೆಟ್ಟಹಲಸೂರು ಪ್ರದೇಶದಲ್ಲಿ ಸಮಾಜ ಸೇವೆಯ ಹೊಸ ಅಧ್ಯಾಯಕ್ಕೆ ನಾಂದಿ ಹಾಡುವಂತೆ, ಹಸಿರೆ ಉಸಿರು ಟ್ರಸ್ಟ್ (ರಿ) ವತಿಯಿಂದ "ಹಸಿರೆ ಉಸಿರು ಆಶ್ರಮ" ಉದ್ಘಾಟನಾ ಸಮಾರಂಭವು ಆಶ್ರಮದ ಆವರಣದಲ್ಲಿ ಯಶಸ್ವಿಯಾಗಿ ನಡೆಯಿತು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದವರು ಟ್ರಸ್ಟ್‌ನ ಸ್ಥಾಪಕರು ಹಾಗೂ ರಾಜ್ಯ ಅಧ್ಯಕ್ಷರಾದ ಡಾ. ಶ್ರೀನಿವಾಸ್ ಮೂರ್ತಿ. ಅವರು ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದ ಪ್ರಶಸ್ತಿಗಳನ್ನು ಪಡೆದ ಸಮಾಜಸೇವಕರಾಗಿದ್ದು, ಈ ಆಶ್ರಮದ ಮೂಲಕ ಮಾನವೀಯ ಸೇವೆಯನ್ನು ಇನ್ನಷ್ಟು ವಿಸ್ತರಿಸುವ ಉದ್ದೇಶವನ್ನು ವ್ಯಕ್ತಪಡಿಸಿದರು.

ಯಲಹಂಕ ತಾಲೂಕಿನ ಜಾಲ ಹೋಬಳಿಯ ಮುನಿಯಪ್ಪ ಲೇಔಟ್‌ನ ನಿವಾಸಿ ಶ್ರೀಮತಿ ಪುಟ್ಟರಂಗಮ್ಮ ಅವರ ಸಹಕಾರದಿಂದ ಈ ಆಶ್ರಮವನ್ನು ಸ್ಥಾಪಿಸಲಾಗಿದೆ. ಪ್ರಕೃತಿಯ ಮಡಿಲಲ್ಲಿ ನಿರ್ಮಿಸಲಾದ ಈ ಆಶ್ರಮವು ಅಗತ್ಯವಿರುವವರಿಗೆ ನೆರವು ನೀಡುವ ಪ್ರಮುಖ ಕೇಂದ್ರವಾಗಲಿದೆ.

ಈ ಸಮಾರಂಭದಲ್ಲಿ ಬೆಟ್ಟಹಲಸೂರು ಗ್ರಾಮ ಪಂಚಾಯತ್ ಅಧ್ಯಕ್ಷರಾದ ನಾಗೇಶ್, ಉಪಾಧ್ಯಕ್ಷ ಪ್ರವೀಣ್, ಶ್ರೀಮತಿ ಲಕ್ಷ್ಮಿ ಸುರೇಶ್, ಲಕ್ಷ್ಮಣ ಹಠವಾಡಿ, ಕರ್ನಾಟಕ ರಾಜ್ಯ ದಲಿತ ಸಿಂಹ ಘರ್ಜನೆ ಸಮಿತಿಯ ಸಂಸ್ಥಾಪಕ ಮತ್ತು ರಾಜ್ಯ ಅಧ್ಯಕ್ಷರಾದ ಓ. ಶ್ರೀನಿವಾಸ್, ರಾಜ್ಯ ಗೌರವಾಧ್ಯಕ್ಷ ನಾಗೇಶ್ ಕುಮಾರ್ ಹಾಗೂ ಸಿರವಾರ ತಾಲೂಕು ಅಧ್ಯಕ್ಷರಾದ ಹುಸೇನ್ ಭಾಷಾ ಕೆ.ಆರ್. ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಿ ಶುಭಾಶಯಗಳನ್ನು ತಿಳಿಸಿದರು.

ವಿಶೇಷವಾಗಿ, ಈ ಮಹತ್ವದ ಸಾಮಾಜಿಕ ಕಾರ್ಯಕ್ಕೆ ದಾನಿಗಳು ಮತ್ತು ಸಾರ್ವಜನಿಕರು ಸಹಕಾರ ನೀಡುವಂತೆ ಮನವಿ ಮಾಡಲಾಯಿತು. ಡಾ. ಶ್ರೀನಿವಾಸ್ ಮೂರ್ತಿ ಅವರ ನೇತೃತ್ವದಲ್ಲಿ ಮುಂದಿನ ದಿನಗಳಲ್ಲಿ ಇನ್ನಷ್ಟು ಸೇವಾ ಕಾರ್ಯಕ್ರಮಗಳನ್ನು ಕೈಗೊಳ್ಳಲು ಈ ಆಶ್ರಮ ಪ್ರೇರಣೆಯಾಗಲಿದೆ ಎಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಮೊದಲನೇ ಪುಟದಿಂದ

# ಅವಧಿಗೆ ಮುನ್ನ ಮುಂಗಾರು ಆಗಮನ

ಇದೇ ವೇಳೆ, ಕೆಲವು ರಾಜ್ಯಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚು ಮಳೆಯಾಗುವ ಸಾಧ್ಯತೆಗಳಿದ್ದು, ಕೃಷಿ ಚಟುವಟಿಕೆಗಳಿಗೆ ಸಹಕಾರಿಯಾಗಬಹುದು ಎಂದು ಹವಾಮಾನ ತಜ್ಞರು ತಿಳಿಸಿದ್ದಾರೆ.ಜನರು ಬಿಸಿಗಾಳಿಯಿಂದ ಜಾಗರೂಕರಾಗಿರಬೇಕು ಹಾಗೂ ಹವಾಮಾನ ಇಲಾಖೆಯ ಸೂಚನೆಗಳನ್ನು ಪಾಲಿಸಬೇಕು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

*ದೇಶದ ಹಲವೆಡೆ ಉಷ್ಣತೆ 43-44 ಸೆಲ್ಸಿಯಸ್ ತಲುಪಿದೆ
*ಮುಂಗಾರು ಮುಂಚಿತ ಆಗಮನ ಸಾಧ್ಯತೆ
*ಮೇ ಅಂತ್ಯದೊಳಗೆ ದಕ್ಷಿಣ ಭಾರತ ಪ್ರವೇಶ ಸಾಧ್ಯತೆ
*ಕೆಲ ರಾಜ್ಯಗಳಲ್ಲಿ ಸರಾಸರಿಗಿಂತ ಹೆಚ್ಚು ಮಳೆಯ ನಿರೀಕ್ಷೆ

# ಡಾ.ರಾಜಕುಮಾರ್ ಅವರ ಸರಳತೆ ಜೀವನದಲ್ಲಿ ಅಳವಡಿಸಿಕೊಳ್ಳಿ: ತಹಶಿಲ್ದಾರ್ ಸುರೇಶ ವರ್ಮಾ

ಕಲಾವಿದರು ಡಾ.ರಾಜ್ ಕುಮಾರ್ ಅವರ ಹೆಸರು ಹೇಳಲೇಬೇಕು. ಅವರ ಆದರ್ಶಗಳನ್ನು ನಾವು, ನೀವು ಎಲ್ಲರೂ ಪಾಲಿಸಬೇಕು ಎಂದರು.

ಉಪನ್ಯಾಸಕರಾಗಿ ಡಾ.ದಂಡಪ್ಪ ಬಿರಾದಾರ್ ಅವರು ಮಾತನಾಡಿ, ರಾಜಕುಮಾರ್ ಅವರು 77 ವರ್ಷಗಳ

ಜೀವನ ಅದ್ಭುತ ಪ್ರಯಾಣವಾಗಿತ್ತು. 1954ರಲ್ಲಿ ಬೇಡರ ಕಣ್ಣಪ್ಪ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಪದಾರ್ಪಣೆ ಮಾಡಿದ ಅವರು 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಾಯಕ ನಟರಾಗಿ ನಟಿಸಿದ್ದಾರೆ. ಒಂದೇ ಚಿತ್ರದಲ್ಲಿ ಅಭಿನಯ ಹಾಗೂ ಗಾಯನ ಎರಡೂ ಕ್ಷೇತ್ರದಲ್ಲಿ ರಾಷ್ಟ್ರೀಯ ಪ್ರಶಸ್ತಿ ಪಡೆದ ದೇಶದ ಏಕೈಕ ನಟ ಡಾ.ರಾಜಕುಮಾರ್ ಅವರಾಗಿದ್ದಾರೆ. ಡಾ.ರಾಜಕುಮಾರ್ ಅವರು ನಟಿಸಿದ ಎಷ್ಟೋ ಚಿತ್ರದಿಂದ ಪ್ರೇರೇಪಿತರಾದ ಜನ ಅವರನ್ನು ಅನುಸರಿಸಿ ಸಮಾಜ ಸೇವೆಗೆ ಮುಂದಾಗಿರುವುದು ವಿಶೇಷವಾಗಿದೆ. ಅವರು ನಟನಾಗಿ ಮಾತ್ರವಲ್ಲದೇ ಒಬ್ಬ ಆದರ್ಶ ವ್ಯಕ್ತಿಯಾಗಿ ಕಾಣುತ್ತಾರೆ. ರಾಜಕುಮಾರ್ ಅವರು ಸಿನಿಮಾ ಕ್ಷೇತ್ರದ ಮೂಲಕ ಕನ್ನಡ ನಾಡು ನುಡಿಗೆ ತಮ್ಮದೇ ಆದ ಕೊಡುಗೆಯನ್ನು ನೀಡಿದ್ದಾರೆ. ಅವರು ಹೆಚ್ಚಾಗಿ ಭಾಷೆ, ನೆಲ,ಜಲ ಮಹತ್ವದ ಕುರಿತ ಚಿತ್ರಗಳಿಗೆ ಒತ್ತು ನೀಡುತ್ತಿದ್ದರು. ರಾಜಕುಮಾರ್ ಅವರು ಅನೇಕ ಕಲಾವಿದರು, ಸಹ ನಟರಿಗೂ ವೈಯಕ್ತಿಕವಾಗಿ ಸಹಾಯ ಹಸ್ತವನ್ನು ಚಾಚುತ್ತಿದ್ದರು. ರಾಜಕುಮಾರ್ ಅವರು ಸರಳ ಜೀವನಕ್ಕೆ ಆದ್ಯತೆ ನೀಡುತ್ತಿದ್ದರು. ಜನರ ಹೃದಯದಲ್ಲಿ ನೆಲನಿಂತ ಮಾನವೀಯ ಗುಣವುಳ್ಳ ನಾಯಕ ನಟರಾಗಿದ್ದರು ಎಂದರು.

ಅಭಿಮಾನಿಗಳಿಂದ ಡಾ.ರಾಜ್‌ಕುಮಾರ್ ಗೀತೆಗಳ ಸಂಗೀತ ಗಾಯನ: ಡಾ.ರಾಜ್ ಕುಮಾರ್ ಅವರ 97ನೇ ಜಯಂತಿ ಅಂಗವಾಗಿ ಉದಯ ಶಂಕರ್ ಅವರಿಂದ ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು, ನಾವಾಡುವ ನುಡಿಯೇ ಕನ್ನಡ ನುಡಿ, ಕೆ.ಕೆ.ಆರ್.ಸಿ.ಟಿ ನೌಕರ ಗುರು ದೇವರಮನಿ ಅರಕೇರಾ (ಜೂನಿಯರ್ ರಾಜ್‌ಕುಮಾರ್) ಅವರು ಆ ದೇವರ ಹಾಡು ಸೇರಿದಂತೆ ಇತರೆ ಹಾಡುಗಳನ್ನು ಹಾಡಿದರು. ಪ್ರತಾಪ ರೆಡ್ಡಿ, ಮೈತ್ರಿಕರ್, ಮಲ್ಲಿಕಾರ್ಜುನ ಹಾಗೂ ಚಂದ್ರಕಾಂತ್ ಮಸಾನಿ ಅವರಿಂದ ರಾಜ್‌ಕುಮಾರ್ ಇತರೆ ಗೀತೆಗಳನ್ನು ಹಾಡಲಾಯಿತು.

ಇದೇ ಸಂದರ್ಭದಲ್ಲಿ ರಾಯಚೂರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ, ವೆಂಕಟೇಶ್ವರ ಕಾಲೇಜಿನ ಪ್ರಾಂಶುಪಾಲ ನರಸಿಂಹ ಸಾಗರ್, ಕಸಾಪ ಕಾರ್ಯದರ್ಶಿ ರೇವತ್ ರಾವ್, ಅನಿಲ ಕರ್ನಾಟಕ ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಅಧ್ಯಕ್ಷ ಬಸವರಾಜ, ಮಹಿಳಾ ಘಟಕದ ಅಧ್ಯಕ್ಷ ನಿರ್ಮಲ ಬೆಣ್ಣೆ, ಮಹಿಳಾ ಮುಖಂಡರಾದ ಪಿ.ಸುರೇಖಾ, ಚೆನ್ನರೆಡ್ಡಿ ಬಿರಾದಾರ್, ರಾಜ್‌ಕುಮಾರ್ ಸಂಘದ ಅಧ್ಯಕ್ಷ ತಮ್ಮೇಶ್ ಸೇರಿದಂತೆ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಇದ್ದರು.

ಪ್ರತಿಭಾ ಗೋನಾಳ ಅವರು ಕಾರ್ಯಕ್ರಮದ ನಿರೂಪಣೆ ಮಾಡಿದರು.

# ಏಪ್ರಿಲ್ 30ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

**ರಾಯಚೂರು:** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ರಾಯಚೂರಿನ ಎಲ್.ವಿ.ಡಿ ಕಾಲೇಜಿನಲ್ಲಿ ಏಪ್ರಿಲ್ 30ರ ಬೆಳಗ್ಗೆ 10ಗಂಟೆಯಿಂದ ಸಂಜೆ 4ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.

ನೇರ ಸಂದರ್ಶನದಲ್ಲಿ ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ. ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9916931616, 9008211750ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಥದ ಚಕ್ರಕ್ಕೆ ಸಿಲುಕಿ ಇಬ್ಬರಿಗೆ ಗಂಭೀರ ಗಾಯ

**ಬಸವಕಲ್ಯಾಣ,ಏ.23:** ಬಸವೇಶ್ವರ ರಥೋತ್ಸವ ಸಂದರ್ಭದಲ್ಲಿ ರಥದ ಚಕ್ರಕ್ಕೆ ಸಿಲುಕಿ ಇಬ್ಬರಿಗೆ ಗಂಭೀರ ಗಾಯವಾದ ಘಟನೆ ಇಂದು ಬೆಳಿಗ್ಗೆ ಸಂಭವಿಸಿದೆ.

ಧನ್ನರಾಜ ಚಾಕುರೆ ( 67) , ರಿಷಬ್ ಶಿವಾನಂದ (29) ಗಾಯಗೊಂಡವರು. ಧನರಾಜ್ ಚಾಕುರೆ ಎಂಬುವವರು ಎರಡು ಕಾಲು ಕಳೆದುಕೊಂಡಿದ್ದು ಹೆಚ್ಚಿನ ಚಿಕಿತ್ಸೆಗಾಗಿ ಕಲಬುರಗಿ ಖಾಸಗಿ ಆಸ್ಪತ್ರೆಗೆ ಸೇರಿಸಲಾಗಿದೆ. ಇವರು ಮೂಲತಃ ಮುಚಳಂಬ ಗ್ರಾಮದ ನಿವಾಸಿ.

ಇನ್ನೊಬ್ಬ ವ್ಯಕ್ತಿ ರಿಷಬ್ ಶಿವಾನಂದ ಎಂಬ ವ್ಯಕ್ತಿಗೆ ಗಂಭೀರ ಗಾಯವಾಗಿ ಒಂದು ಕಾಲು ಕತ್ತರಿಸಿದೆ.ಇವರನ್ನು ಸೋಲಾಪುರ ಖಾಸಗಿ ಆಸ್ಪತ್ರೆಗೆ ಸೇರಿಸಲಾಗಿದೆ. ಇವರು ಬಸವಕಲ್ಯಾಣ ಕಾಳಿಗಲ್ಲಿ ನಿವಾಸಿ .ಇಬ್ಬರ ಆರೋಗ್ಯ ಸ್ಥಿತಿಯು ಚಿಂತಾಜನಕವಾಗಿದೆ ಎಂದು ಕುಟುಂಬದ ಮೂಲಗಳಿಂದ ತಿಳಿದುಬಂದಿದೆ.

# ಪುತ್ತೂರು: ಕಾಲೇಜು ವಿದ್ಯಾರ್ಥಿಯ ಮೇಲೆ ತಂಡದಿಂದ ಹಲ್ಲೆ



**ಪುತ್ತೂರು:** ಹಳೆಯ ದ್ವೇಷದ ಹಿನ್ನೆಲೆಯಲ್ಲಿ ಕಾಲೇಜು ವಿದ್ಯಾರ್ಥಿಯೋರ್ವನ ಮೇಲೆ ತಂಡವೊಂದು ಹಲ್ಲೆ ನಡೆಸಿ, ಜೀವಬೆದರಿಕೆ ಒಡ್ಡಿರುವ ಘಟನೆ ಪುತ್ತೂರು ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಬಳಿ ನಡೆದಿದೆ.

ಬೆಳ್ತಂಗಡಿ ನಿವಾಸಿ, ಪುತ್ತೂರಿನ ಖಾಸಗಿ ಕಾಲೇಜಿನ ವಿದ್ಯಾರ್ಥಿ ಆದಿಲ್ ಹುಸೈನ್ (21) ಹಲ್ಲೆಗೊಳಗಾದವರು. ಇವರು ಏಪ್ರಿಲ್ 22ರ ಸಂಜೆ ತನ್ನ ಸ್ನೇಹಿತರಾದ ಸುಹೇಲ್ ಮತ್ತು ಅಝರ್ ಅವರೊಂದಿಗೆ ಪುತ್ತೂರು ಕಸಬಾ ಗ್ರಾಮದ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಸಮೀಪ ಚಹಾ ಕುಡಿಯುತ್ತಿದ್ದರು. ಈ ವೇಳೆ ಅಲ್ಲಿಗೆ ಬಂದ ಪರಿಚಯಸ್ಥರಾದ ಬಿ.ಕೆ. ಮೊಯಿನುದ್ದೀನ್, ಮುಹದ್ ಹಾಗೂ ಇತರ ಐವರು ಸೇರಿ ಆದಿಲ್ ಅವರ ಮೇಲೆ ಏಕಾಏಕಿ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ.

ಹಲ್ಲೆಯನ್ನು ಪ್ರಶ್ನಿಸಿದ ಆದಿಲ್ ಅವರ ಸ್ನೇಹಿತರಿಗೂ ಆರೋಪಿಗಳು ಬೆದರಿಕೆ ಹಾಕಿದ್ದಾರೆ. ಸ್ಥಳದಲ್ಲಿದ್ದ ಸಾರ್ವಜನಿಕರು ಗಲಾಟೆ ಬಿಡಿಸಲು ಮುಂದಾದಾಗ, ಆರೋಪಿಗಳು ವಿದ್ಯಾರ್ಥಿಗೆ ಅವಾಚ್ಯ ಶಬ್ದಗಳಿಂದ ಬೈದು, ಜೀವಬೆದರಿಕೆ ಒಡ್ಡಿ ಸ್ಥಳದಿಂದ ಪರಾರಿಯಾಗಿದ್ದಾರೆ. ಗಾಯಗೊಂಡ ಆದಿಲ್ ಅವರು ಪುತ್ತೂರು ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಕೆಲವು ತಿಂಗಳ ಹಿಂದೆ ಕಾಲೇಜು ವಿದ್ಯಾರ್ಥಿಗಳಿಗೆ ಆರೋಪಿ ಮೊಯಿನುದ್ದೀನ್ ಮತ್ತು ತಂಡವು ಹಲ್ಲೆ ಮಾಡುತ್ತಿದ್ದಾಗ, ಆದಿಲ್ ಅವರು ಮಧ್ಯ ಪ್ರವೇಶಿಸಿ ಗಲಾಟೆ ಬಿಡಿಸಿದ್ದರು. ಇದೇ ದ್ವೇಷವನ್ನು ಮನಸ್ಸಿನಲ್ಲಿಟ್ಟುಕೊಂಡು ಈಗ ಹಲ್ಲೆ ನಡೆಸಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

# ಡಾ ಬಿ ಆರ್ ಅಂಬೇಡ್ಕರ್ ರವರ 135 ನೇ ಜನ್ಮ ದಿನಾಚರಣೆ




ವಿಟ್ಲ ದ ಕ ಜಿಲ್ಲಾ ದಲಿತ್ ಸೇವಾ ಸಮಿತಿ ಇದರ ವತಿಯಿಂದ ಜಿಲ್ಲಾ ಮಟ್ಟದ ಸಂವಿಧಾನ ಶಿಲ್ಪಿ ಡಾ ಬಿ ಆರ್ ಅಂಬೇಡ್ಕರ್ ರವರ 135 ನೇ ಜನ್ಮ ದಿನಾಚರಣೆಯನ್ನು ವಿಟ್ಲ ಮಾದರಿ ಶಾಲೆ ಸಭಾ ಭವನದಲ್ಲಿ ನಡೆಸಲಾಯಿತು. ಈ ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಸದಸ್ಯೆ ಪ್ರತಿಭಾ ಕುಲಾಯಿ ಉದ್ಘಾಟಿಸಿದರು. ಲೇಖಕ ಮತ್ತು ಉಪನ್ಯಾಸಕ ಅಬ್ದುಲ್ ರಜಾಕ್ ಅನಂತಾಡಿ ಅಂಬೇಡ್ಕರ್ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು.

ಸಂಘಟನೆಯ ಸ್ಥಾಪಕ ಅಧ್ಯಕ್ಷ ಬಿ ಕೆ ಸೇಸಪ್ಪ ಬೆದ್ರಕಾಡು ಸಭಾಧ್ಯಕ್ಷತೆ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿ ದ ಪುತ್ತೂರು ವಿಧಾನ ಸಭಾ ಕ್ಷೇತ್ರದ ಶಾಸಕ ಅಶೋಕ್ ಕುಮಾರ್ ರೈ ಮಾತಾಡಿ "ಸೇಸಪ್ಪ ಬೆದ್ರಕಾಡುರವರು ಪ ಜಾತಿ ಪಂಗಡಗಳ ಪರವಾಗಿ ಹೋರಾಟ ಮಾಡುವುದಲ್ಲದೆ ಸಂಘಟನೆಯ ಮುಖಾಂತರ ಸಮಾಜದ ಸೇವೆಯನ್ನು ಮಾಡುವುದು ಶ್ಲಾಘನೀಯ ಮತ್ತು ಪ್ರತಿ ವರ್ಷ ಅಂಬೇಡ್ಕರ್ ಜನ್ಮ ದಿನಾಚರಣೆಯನ್ನು ಅತ್ಯುತ್ತಮ ರೀತಿಯಲ್ಲಿ ಆಚರಿಸುವುದು ಉತ್ತಮ ಕೆಲಸ" ಎಂದರು.

ಈ ಸಂದರ್ಭದಲ್ಲಿ ಸುಮಾರು 180 ವಿದ್ಯಾರ್ಥಿಗಳಿಗೆ ಟಡಿಓಟ ಮತ್ತು ಇತರ ದಾನಿಗಳ ನೆರವಿನಿಂದ ಕೊಡಲ್ಪಟ್ಟ ಬರೆಯುವ ಪುಸ್ತಕ ವಿತರಣೆ, ಪಿಯುಸಿ ಯಲ್ಲಿ ಡಿಸ್ಟಿಂಕ್ಷನ್ ನಲ್ಲಿ ತೇರ್ಗಡೆ ಹೊಂದಿದ ಫಾತಿಮತ್ ಶಾಹಿಮ ಮತ್ತು ಪೂರ್ಣಶ್ರೀ ಮಲ್ಯ ಹಾಗೂ ವಿಟ್ಲ ಮೆಸ್ಕಾಂ ಉಪವಿಭಾಗದ ಪವರ್ ಮ್ಯಾನ್ ಗಳನ್ನು ಅಭಿನಂದಿಸಲಾಯಿತು.

ಪದ್ಮನಾಭ ಪೂಜಾರಿ ಸಣ್ಣಗುತ್ತು ಅಳಿಕೆ ನೋಟರಿ ಬಂಟ್ವಾಳ, ದಿನೇಶ್ ಮೂಳೂರು ಜಿಲ್ಲಾಧ್ಯಕ್ಷ ಪರಿಶಿಷ್ಟ ಜಾತಿ ಕಾಂಗ್ರೆಸ್ ಘಟಕ ದ ಕ ಮಂಗಳೂರು, ಶ್ರೀನಿವಾಸ್ ಅರ್ಬಿಗುಡ್ಡೆ ಜಿಲ್ಲಾಧ್ಯಕ್ಷ ಆದಿದ್ರಾವಿಡ ಸಮಾಜ ಸೇವಾ ಸಂಘ ದ ಕ ಮಂಗಳೂರು, ರಾಮಣ್ಣ ಪಿಲಿಂಜ ಅಕ್ರಮ ಸಕ್ರಮ ಸಮಿತಿ ಪುತ್ತೂರು ವಿಧಾನ ಸಭಾ ಕ್ಷೇತ್ರ, ಮನೋಹರ ಪಲ್ಲತ್ತಡ್ಕ ಸುಳ್ಯ ಸ್ಥಾಪಕರು ಅಂಬೇಡ್ಕರ್ ವಿವಿಧೋದ್ದೇಶ ಸಹಕಾರಿ ಸಂಘ ಸುಳ್ಯ, ಗೋಪಾಲ ನೇರಳಕಟ್ಟೆ ಜಿಲ್ಲಾಧ್ಯಕ್ಷ ದ ಕ ಜಿಲ್ಲಾ ದಲಿತ್ ಸೇವಾ ಸಮಿತಿ ಹಾಗೂ ಜಿಲ್ಲಾಧ್ಯಕ್ಷೆ ಯಾಮಿನಿ ಬೆಟ್ಟಂಪ್ಪಾಡಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಕಾರ್ಯದರ್ಶಿ ಪ್ರತೀಕ್ಷಾ ಬೆದ್ರಕಾಡು ಅಂಬೇಡ್ಕರ್ ಪೀಟಿಕೆ ಓದಿ ಸ್ವಾಗತಿಸಿದರು. ಸದಸ್ಯರಾದ ಸುಶ್ಮಿತಾ ಮತ್ತು ಕುಶಾಲಾಕ್ಷಿ ಕೆದಿಲ ನಾಡಗೀತೆ ಹಾಡಿದರು. ಕಾರ್ಯಾಧ್ಯಕ್ಷ ಚಂದ್ರಶೇಖರ ಯು ವಿಟ್ಲ ಪ್ರಸ್ತಾವಿಸಿದರು. ಕೋಶಾಧಿಕಾರಿ ಪ್ರಸಾದ್ ಅನಂತಾಡಿ ವಂದಿಸಿದರು. ಉಪಾಧ್ಯಕ್ಷ ಪ್ರಸಾದ್ ಬೊಳ್ಮಾರ್ ನಿರೂಪಿಸಿದರು.

# ಗೋಪ್ರೇಮಿ ವಾಸಪ್ಪರ ಮನೆಯ 'ಗೌರಿ'ಗೀಗ 28ರ ಹರೆಯ!



**ಉಪ್ಪಿನಂಗಡಿ:** ಹಸು ಹಾಲು ಕೊಡುವುದನ್ನು ಕಡಿಮೆ ಮಾಡಿದಾಗ ಕಸಾಯಿಕಾನೆಗೆ ತಳ್ಳುವವರ ಸಂಖ್ಯೆಯೇ ಹೆಚ್ಚಾಗಿರುವ ಇಂದಿನ ದಿನಗಳಲ್ಲಿ ಬಿಳಿಯೂರು ಗ್ರಾಮದ ಬೆದ್ರದ ಕುಟುಂಬವೊಂದರ ಗೋಪ್ರೀತಿ ಪ್ರತಿಯೊಬ್ಬರಿಗೂ ಮಾದರಿಯಾಗಿದೆ. ಹೌದು.. ಬಂಟ್ವಾಳ ತಾಲೂಕಿನ ಬಿಳಿಯೂರು ಗ್ರಾಮದ ಬೆದ್ರ ಮನೆಯ ವಾಸಪ್ಪ ಪೂಜಾರಿ ಎಂಬವರ ಮನೆಯಲ್ಲಿರುವ ಗೋವು 28 ವರ್ಷಗಳನ್ನು ಪೂರೈಸಿದ್ದು, ಹುಟ್ಟು, ತಾರುಣ್ಯ, ಯೌವ್ವನ, ವೃದ್ಧಾಪ್ಯವನ್ನೂ ಒಂದೇ ಮನೆಯಲ್ಲಿ ಕಂಡಿರುವುದು ವಿಶೇಷವಾಗಿದೆ.

ಹೈನುಗಾರಿಕೆಗಾಗಿ ಗೋವುಗಳನ್ನು ಸಾಕುವ ಮಂದಿ ಹಾಲಿನ ಲಭ್ಯತೆಯನ್ನು ಆಧರಿಸಿ ಗೋವುಗಳನ್ನು ಉಳಿಸುವ ಅಥವಾ ಮಾರಾಟ ಮಾಡುವ ನಿರ್ಧಾರವನ್ನು ತಳೆಯುತ್ತಾರೆ. ತತ್ ಪರಿಣಾಮ ಗೋವುಗಳು ತನ್ನ ಜೀವಿತಾವಧಿಯಲ್ಲಿ ಹಲವಾರು ಮಂದಿಯ ಯಜಮಾನರನ್ನು ಕಂಡು ನಿರುಪಯುಕ್ತ ಎಂದೆನಿಸಿದಾಗ ಕಸಾಯಿಖಾನೆಯತ್ತ ಸಾಗುತ್ತಿರುವುದನ್ನು ಕಾಣುತ್ತಿರುವ ಇಂದಿನ ದಿನಗಳಲ್ಲಿ ಗೋವು ಮುದಿಯಾದರೂ ಅದು ನನ್ನ ಮನೆ ಮಗಳು ಎಂಬಂತೆ ಸಾಕುತ್ತಿರುವ ವಾಸಪ್ಪ ಪೂಜಾರಿಯವರ ನಡೆ ಶ್ಲಾಘನೀಯವಾದದ್ದು.

1998ರಲ್ಲಿ ಹುಟ್ಟಿದ ಗೌರಿ: 1998ರಲ್ಲಿ ವಾಸಪ್ಪ ಪೂಜಾರಿ ಹಟ್ಟಿಯಲ್ಲೇ ಜನಿಸಿದ ಗೌರಿ ಇಷ್ಟು ವರುಷಗಳ ಕಾಲ ಈ ಮನೆಯವರಿಗೆ ಹಾಲುಣಿಸಿದ್ದಾಳೆ. ಹೀಗಾಗಿ ಗೌರಿ ಕೇವಲ ಹಸುವಲ್ಲ ನಮ್ಮ ಮನೆಯ ಮಗಳು ಎಂದು ಮನೆ ಮಾಲೀಕ ವಾಸಪ್ಪ ಬಣ್ಣಿಸಿದ್ದಾರೆ. ಗೋವಿನ ಯಜಮಾನ ವಾಸಪ್ಪ ಹೇಳುವ ಪ್ರಕಾರ ಇತ್ತೀಚೆಗೆ ಗೌರಿ ಆಹಾರ ತಿನ್ನುವುದನ್ನು ಕಡಿಮೆ ಮಾಡುತ್ತಿದ್ದಾಳೆ. ಗೌರಿ ಇನ್ನು ತುಂಬ ದಿವಸ ನಮ್ಮೊಂದಿಗಿರುವುದು ಅನುಮಾನ ಎಂದು ಬೇಸರ ವ್ಯಕ್ತಪಡಿಸುತ್ತಾರೆ.

ಪ್ರೀತಿ ಮೆಚ್ಚುವಂತಹದ್ದು: ಕೆದಿಲ ಗಣರಾಜ್ ಭಟ್ ನಮಗೆ ಹಾಲುಣಿಸಿದ ಗೋ ಮಾತೆಯ ಋಣವನ್ನು ಮರೆತು ಹಸು ಹಾಲು ಕೊಡುವುದನ್ನು ಕಡಿಮೆ ಮಾಡಿದಾಗ ಕಸಾಯಿಕಾನೆಗೆ ತಳ್ಳುವವರ ಸಂಖ್ಯೆಯೇ ಹೆಚ್ಚಾಗಿರುವ ಈ ಸಮಯದಲ್ಲಿ 28 ವರುಷಗಳಿಂದ ತಮ್ಮ ಮನೆಯವರಿಗೆ ಹಾಲುಣಿಸಿದ ಗೌರಿಯನ್ನು ಸಾಕುತ್ತಾ ಬಂದ ವಾಸಪ್ಪ ಪೂಜಾರಿಯವರ ಮನೆಯವರ ಗೋವಿನ ಪ್ರೀತಿಯನ್ನು ಮೆಚ್ಚಲೇ ಬೇಕು ಎಂದು ಹೇಳುತ್ತಾರೆ ಕೆದಿಲದ ಗಣರಾಜ ಭಟ್.

# ಮಹರ್ಷಿ ಶ್ರೀ ಭಗೀರಥರ ಜಯಂತಿ ಆಚರಣೆ

**ಗದಗ,ಏ,.24:** "ಜಲವೇ ಜೀವನ" ಎಂಬ ತತ್ವಕ್ಕೆ ಸಾಕ್ಷಿಯಾಗಿ, ಸಕಲ ಜೀವರಾಶಿಗಳ ಉದ್ಧಾರಕ್ಕಾಗಿ ಗಂಗೆಯನ್ನು ಧರೆಗೆ ತಂದು ಲೋಕಕಲ್ಯಾಣಕ್ಕಾಗಿ ಅಸಾಧ್ಯವಾದುದನ್ನು ಸಾಧಿಸಿದ ಮಹಾನ್ ಪುರುಷ ಮಹರ್ಷಿ ಭಗೀರಥ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು ಶ್ಲಾಘಿಸಿದರು.ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಮಹರ್ಷಿ ಶ್ರೀ ಭಗೀರಥ ಜಯಂತಿಯನ್ನು ಜಿಲ್ಲಾಡಳಿತ ಜಿಪಂ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಹಯೋಗದಲ್ಲಿ ಸಾಂಕೇತಿಕವಾಗಿ ಪುಷ್ಪಾರ್ಚನೆಯೊಂದಿಗೆ ಆಚರಿಸಲಾಯಿತು.



ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳು ಮಾತನಾಡಿದ ನೀರಿಲ್ಲದೆ ಜೀವನವಿಲ್ಲ ಎಂಬ ಸತ್ಯವನ್ನು ಹೇಳಿದರು. ಮಾನವ ಸಂಕುಲವು ನದಿಗಳ ತೀರದಲ್ಲಿಯೇ ನಾಗರಿಕತೆಗಳನ್ನು (ಹರಪ್ಪ, ಮೊಹೆಂಜೋದಾರೊ ಮತ್ತು ಸಿಂಧೂ ನಾಗರಿಕತೆ) ಬೆಳೆಸಿಕೊಂಡಿರುವುದು ಜಲದ ಪ್ರಾಮುಖ್ಯತೆಯನ್ನು ಸಾರುತ್ತದೆ ಅಂತಹ ಪವಿತ್ರ ಗಂಗೆಯನ್ನು ಭೂಮಿಗೆ ತಂದ ಭಗೀರಥರ ಕಾರ್ಯ ಸ್ಮರಣೀಯವಾದುದು ಎಂದು ಹೇಳಿದರು.

ಮೂರು ಲೋಕಗಳಲ್ಲಿ ಗಂಗೆ ಭಗೀರಥರು ಕೇವಲ ಭೂಮಿಗೆ ಮಾತ್ರವಲ್ಲದೆ ಪಾತಾಳ, ಭೂಮಿ ಮತ್ತು ಆಕಾಶ ಎಂಬ ಮೂರೂ ಲೋಕಗಳಲ್ಲಿ ಗಂಗೆಯು ನೆಲೆಸುವಂತೆ ಮಾಡಿದರು. ಈ ಮೂಲಕ ಸಕಲ ಜೀವರಾಶಿಗಳಿಗೂ ಅನುಕೂಲ ಮಾಡಿಕೊಟ್ಟರು ಎಂದು ತಿಳಿಸಿದರು.ಸಮಾಜಕ್ಕೆ ಒಳ್ಳೆಯದಾಗುತ್ತದೆ ಎಂದಾದರೆ, ಅಸಾಧ್ಯವಾದುದನ್ನು ಸಾಧ್ಯವಾಗಿಸುವುದು ನಮ್ಮ ಜವಾಬ್ದಾರಿಯಾಗಿದೆ ಎಂಬ ಪಾಠವನ್ನು ಭಗೀರಥರ ಜೀವನದಿಂದ ಕಲಿಯಬೇಕಿದೆ. ಅವರ ದಿಟ್ಟ ನಿರ್ಧಾರ ಮತ್ತು ಕಠಿಣ ಪ್ರಯತ್ನವು ಇಂದಿನ ಸಮಾಜಕ್ಕೆ ದೊಡ್ಡ ಪ್ರೇರಣೆಯಾಗಿದೆ.

ಲೋಕಕಲ್ಯಾಣಕ್ಕಾಗಿ ಶ್ರಮಿಸಿದ ಈ ಮಹಾನ್ ಚೇತನದ ಜನ್ಮದಿನಾಚರಣೆಯ ಸಂದರ್ಭದಲ್ಲಿ ಅವರ ಗುಣಗಾನ ಮಾಡುವುದು ನಮ್ಮೆಲ್ಲರ ಪುಣ್ಯದ ಕೆಲಸವಾಗಿದೆ ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ಅಭಿಪ್ರಾಯಪಟ್ಟರು.

ಮಂಜುನಾಥ ಹುಯಿಲಗೋಳ ಸರ್ವರನ್ನು ಸ್ವಾಗತಿಸಿ ವಂದಿಸಿದರು. ಮಹರ್ಷಿ ಶ್ರೀ ಭಗೀರಥರ ಬಗ್ಗೆ ಮಾತನಾಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ. ಆರ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ ಆರ್ ಮುಂಡರಗಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ನಂದಾ ಹಣಬರಹಟ್ಟಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜು ಸೊಪಡ್ಲ, ಬಿ. ಎಫ್. ಉಪ್ಪಾರ, ಪ್ರಧಾನ ಕಾರ್ಯದರ್ಶಿ ರಾಜು ಗಡ್ಡಿ, ಮರ್ಹಷಿ ಶ್ರೀ ಭಗೀರಥ ಉಪ್ಪಾರ ಸಂಘದ ಜಿಲ್ಲಾಧ್ಯಕ್ಷ ಭೀಮನಗೌಡ ಪಾಟೀಲ್, ಸಮಾಜ ಮುಖಂಡರು ಹನುಮಂತಪ್ಪ ಗರಗ, ಚನ್ನಬಸವ್ವ ಸಾವಕ್ಕನವರ ಉಪಸ್ಥಿತರಿದ್ದರು.

# ರಾಜಕಾರಣಿಗಳಿಗಿಂತ ದೊಡ್ಡ ನಟರಿಲ್ಲ



**ಮೈಸೂರು: ಏ.24:–** ರಾಜಕಾರಣಿಗಳಿಗಿಂತ ದೊಡ್ಡ ನಟರಿಲ್ಲ. ಅವರನ್ನು ಮೀರಿಸಲು ಡಾ.ರಾಜ್‌ಕುಮಾರ್ ಅವರ ನಟನೆಯೂ ಸಾಕಾಗುವುದಿಲ್ಲ ಎಂದು ಮಾಜಿ ಸಭಾಪತಿ ಕೆ.ಆರ್.ರಮೇಶ್ ಕುಮಾರ್ ವ್ಯಂಗ್ಯವಾಡಿದರು.

ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ ನಡೆದ ಕರ್ನಾಟಕ ರಾಜ್ಯ ರಾಜ್ಯಶಾಸ್ತ್ರ ಅಧ್ಯಾಪಕರ ಸಂಘದ 21ನೇ ಮಹಾ ಸಮ್ಮೇಳನ ಮತ್ತು ರಜತ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರಾಜಕಾರಣಿಗಳ ನಟನೆ ಮುಂದೆ ಅವರ ನಟನೆ ಕೆಲಸ ಮಾಡುವುದಿಲ್ಲ. ಇದನ್ನು ರಾಜ್ಯಶಾಸ್ತ್ರದ ಸಿಲಬಗಳಲ್ಲಿ ಹೇಳಿರುವುದಿಲ್ಲ. ಕ್ಯಾಲೆಂಡರ್, ಸಮಯದ ಬಗ್ಗೆ ಹೆಚ್ಚು ತಿಳಿದುಕೊಂಡಿರುವುದೇ ರಾಜಕಾರಣಿಗಳು. ಕೌಟಿಂಗ್ ಯಾವಾಗ ಆಗುತ್ತದೆ, ಮುಂದಿನ ಚುನಾವಣೆ ಯಾವಾಗ ನಡೆಯುತ್ತದೆ. ಈ ಮಧ್ಯಂತರ ಅವಧಿಯಲ್ಲಿ ಜನರ ಮುಂದೆ ಯಾವ ಯಾವ ಅವತಾರದಲ್ಲಿ ಕಾಣಿಸಿಕೊಳ್ಳಬೇಕು ಎಂದು ತಿಳಿದುಕೊಂಡಿರುತ್ತಾರೆ ಎಂದರು.

ಮಾಧ್ಯಮಗಳ ಮುಖಾಂತರ ಅಥವಾ ವಿಧಾನಸಭೆಯ ಸದಸ್ಯರಾಗಿದ್ದಾಗ ಕಲಾಪಗಳಲ್ಲಿ ಭಾಗವಹಿಸುವ ಸಂದರ್ಭಗಳಲ್ಲಿ ನಾವು ತೆಗೆದುಕೊಳ್ಳುವಂತಹ ನಿಲುವು, ನಾವು ಆಡುವಂತಹ ಮಾತುಗಳು ಹಾಗೂ ನಾವು ಪ್ರತಿಪಾದಿಸುವ ಕೆಲವು ವಿಚಾರಗಳು ಸಹಜವಾಗಿ ಪ್ರತಿಯೊಬ್ಬ ರಾಜಕೀಯ ಜೀವನದಲ್ಲಿ ಇರುವಂತಹದ್ದನ್ನು ಸಮಾಜಕ್ಕೆ ಪರಿಚಯ ಮಾಡಿಸುತ್ತದೆ ಎಂದರು.

ಮೈಸೂರು ರಾಜರು ಪರೋಪಕಾರಿಗಳು. ದೇಶದ ಇತರ ರಾಜರು ಅಥವಾ ಬೇರೆ ದೇಶದ ರಾಜರು ಮೈಸೂರು ರಾಜರ ಹಾಗೆ ಇರಲಿಲ್ಲ. ಇವರನ್ನು ಇಂದಿಗೂ ಕೂಡ ನೆನಪಿಸಿಕೊಳ್ಳಬೇಕು. ಆಂಗ್ಲರು ನಮ್ಮ ದೇಶವನ್ನು ಆಳುತ್ತಿದ್ದ ಸಮಯದಲ್ಲಿಯೇ, ಪ್ರಜಾಪ್ರಭುತ್ವದ ಮಾತು ಮಹತ್ವ ಪಡೆದುಕೊಳ್ಳದೆ ಇದ್ದ ಕಾಲದಲ್ಲಿ ಮೈಸೂರಿನಲ್ಲಿ ಪ್ರಜಾಪ್ರತಿನಿಧಿ ಸಭೆ ಮಾಡಲು ಅಂದಿನ ರಾಜರು ಅವಕಾಶ ಕೊಟ್ಟರು ಎಂದು ತಿಳಿಸಿದರು.

ರಾಜರು ಇಲ್ಲಿನ ಪ್ರಜೆಗಳಿಗೆ ಕೆಲವು ವಿಷಯಗಳನ್ನು ಪ್ರಸ್ತಾಪ ಮಾಡಲು, ಪ್ರಶ್ನೆ ಮಾಡಲು ಅವಕಾಶ ನೀಡುತ್ತಿದ್ದರು. ಚುನಾವಣಾ ಹಂತಕ್ಕೆ ಬಂದು ಚುನಾವಣೆಗೆ ಯಾರು ಇರಬೇಕು ಎಂದು ಹೇಳುತ್ತಾರೆ. ಪ್ರಜಾಪ್ರಭುತ್ವ ವ್ಯವಸ್ಥೆಗೂ, ಕನ್ನಡಿಗರಿಗೂ ಸಂಬಂಧ ಇದೆ. ವಿಶ್ವದ ಇತಿಹಾಸದಲ್ಲಿ ಪ್ರಜಾಪ್ರಭುತ್ವದ ಬೆಳವಣಿಗೆಗೆ ನಮ್ಮದೂ ಒಂದು ಪಾತ್ರ ಇದೆ ಎಂದರು.

ಇಂಗ್ಲೆಂಡ್ ದೇಶದಲ್ಲಿ ರಾಜರು ವಿಲಾಸಿ ಜೀವನಕ್ಕೆ ಜೋತು ಬೀಳುತ್ತಾರೆ. ಅವರಿಗೆ ಜನರು, ದೇಶ ಏನಾದರೂ ಆಗಲಿ ಎಂದು ಮೋಜು ಮಾಡುತ್ತಾರೆ. ಅವರಿಗೆ ವಿಲಾಸಿ ಜೀವನಕ್ಕೆ ದುಡ್ಡು ಬೇಕು. ಹೀಗಾಗಿ ಜನರ ಮೇಲೆ ಅಧಿಕ ತೆರಿಗೆ ಹಾಕಿದರು. ರಾಜರು ಹೇಳಿದ ತಕ್ಷಣ ಅವರ ಮಾತು ಪಾಲಿಸಲು ಭಟ್ಟಂಗಿಗಳು ಇರುತ್ತಾರೆ. ದೊರೆಯನ್ನು ಮೆಚ್ಚಿ ಭಟ್ಟಂಗಿ, ಅವಿವೇಕಿಯಾದ ದೊರೆ, ಇಬ್ಬರೂ ಸೇರಿ ಜನರ ಮೇಲೆ ಬೀಳುತ್ತಾರೆ ಎಂದು ತಿಳಿಸಿದರು.

ಸ್ವಾತಂತ್ರ್ಯ ಪೂರ್ವದಲ್ಲಿ ಭಾರತ ಒಂದು ದೇಶವಾಗಿರಲಿಲ್ಲ. ಭಾರತ ಎಂಬ ಪರಿಕಲ್ಪನೆಯೂ ಇರಲಿಲ್ಲ. ಅಂಬೇಡ್ಕರ್ ದುಂಡು ಮೇಜಿನ ಸಭೆಯಲ್ಲಿ ಭಾಗವಹಿಸಿ ದೇಶದ ಸಮಸ್ಯೆಗಳ ಬಗ್ಗೆ ಮಂಡಿಸಿದರು. ಅವರ ವಿದ್ವತ್ತಿಗೆ, ತಿಳುವಳಿಕೆಗೆ ಅವರನ್ನು ಗೌರವಿಸಬೇಕು. ರಾಜಕಾರಣದಲ್ಲಿ ಅಂದರೆ ಸಾರ್ವಜನಿಕ ಜೀವನದಲ್ಲಿ ನಾವು ಆಡುವ ಮಾತು ಹೃದಯಾಳಂತರದಿಂದ ಬರಬೇಕು. ಅದು ನಮ್ಮ ಅನುಭವ, ಬದ್ಧತೆ ಆಗಿರಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ, ಕುಲಸಚಿವ ಪ್ರೊ.ಎಸ್.ಕೆ.ನವೀನ್ ಕುಮಾರ್, ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವೆ ಎಂ.ಕೆ.ಸವಿತಾ, ಜವಾಹರಲಾಲ್ ನೆಹರೂ ವಿಶ್ವವಿದ್ಯಾನಿಲಯದ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ವೆಲೆರಿಯನ್ ರೋಡ್ರಿಗಸ್, ಸಂಘದ ಸಂಘಟನಾ ಕಾರ್ಯದರ್ಶಿ ಪ್ರೊ.ಜೆ.ಸೋಮಶೇಖರ್ ಗೌರವಾಧ್ಯಕ್ಷ ಪ್ರೊ.ಕೃಷ್ಣ ಆರ್.ಹೊಂಬಳ್, ಇತರರಿದ್ದರು.

# ಭಗೀರಥರ ತಪಸ್ಸು ಪರಿಶ್ರಮ ಎಲ್ಲರಿಗೂ ಮಾದರಿ : ಎಂ ಎ ಗಫೂರ್



**ಉಡುಪಿ:** ರಾಜನಾಗಿ, ಋಷಿಯಾಗಿ ಭಗೀರಥರು ಸಮಾಜಕ್ಕೆ ಒಂದು ದೊಡ್ಡ ಸಂದೇಶವನ್ನು ನೀಡಿದ್ದಾರೆ. ಅವರು ತಮ್ಮ ಛಲ ಹಾಗೂ ಪರಿಶ್ರಮದ ಮೂಲಕ ಗಂಗೆಯನ್ನೇ ಧರೆಗೆ ತಂದವರು. ಭಗೀರಥರ ತಪಸ್ಸು ಹಾಗೂ ಪರಿಶ್ರಮದ ಮನೋಭಾವವನ್ನು ನಮ್ಮ ದುಡಿಮೆ ಮತ್ತು ದಿನನಿತ್ಯದ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರಾವಳಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಂ.ಎ ಗಫೂರ್ ಹೇಳಿದರು.

ಅವರು ರಜತಾದ್ರಿಯ ಜಿಲ್ಲಾಧಿಕಾರಿ ಕಚೇರಿಯ ಕೋರ್ಟ್ ಹಾಲ್‌ನಲ್ಲಿ ಜಿಲ್ಲಾಡಳಿತ ಆಶ್ರಯದಲ್ಲಿ ನಡೆದ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ, ಶ್ರೀ ಭಗೀರಥರ ಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು. ಸಮಾಜದಲ್ಲಿರುವ ಅಸಮಾನತೆ, ಅಸ್ಪಶ್ಯತೆ ಹಾಗೂ ಮೌಢ್ಯಗಳನ್ನು ಹೋಗಲಾಡಿಸಲು ಶ್ರಮಿಸಿ ಸಮಾಜಕ್ಕೆ ಕೊಡುಗೆ ನೀಡಿದ ದಾರ್ಶನಿಕರ ಕುರಿತು ಯುವ ಪೀಳಿಗೆಗೆ ತಿಳಿಸುವ ನಿಟ್ಟಿನಲ್ಲಿ ಸರ್ಕಾರವು ಜಯಂತಿ ಕಾರ್ಯಕ್ರಮವನ್ನು ಆಯೋಜಿಸಿಕೊಂಡು ಬಂದಿದ್ದು, ಯುವ ಪೀಳಿಗೆಯು ಮಹನೀಯರ ತತ್ವ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಜಯಂತಿ ಕಾರ್ಯಕ್ರಮಗಳು ಅರ್ಥಪೂರ್ಣಗೊಳ್ಳುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಅಬೀದ್ ಗದ್ಯಾಳ್, ನೀರಿನಿಂದ ಉಪ್ಪು ತಯಾರಿಸಿದವರು ಉಪ್ಪಾರ ಜನಾಂಗದವರಾದರು. ಹಾಗಾಗಿ ಉಪ್ಪಾರ ಜನಾಂಗಕ್ಕೂ ಭಗೀರಥ ಮಹರ್ಷಿಗೂ ಸಂಬಂಧ ಇದೆ. ಕೆಲಸದಲ್ಲಿ ಬದ್ಧತೆ ಮುಖ್ಯ ಯಾವುದೇ ಕೆಲಸದ ಬಗ್ಗೆ ಬದ್ಧತೆ ಇದ್ದಲ್ಲಿ ಮಾತ್ರವೇ ಯಶಸ್ವಿಗೊಳಿಸಲು ಸಾಧ್ಯ ಎಂದ ಅವರು, ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಅನುಕೂಲವಾಗುವ ನಿಟ್ಟಿನಲ್ಲಿ ಅಧಿಕಾರಿಗಳು ಪ್ರಾಮಾಣಿಕ ಕೆಲಸ ಮಾಡಬೇಕು ಎಂದರು. ಕಾರ್ಯಕ್ರಮದಲ್ಲಿ ಉಪತಹಸೀಲ್ದಾರ್ ನವನೀತ್, ಜಿಲ್ಲಾಡಳಿತ ಸಿಬ್ಬಂದಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಪೂರ್ಣಿಮಾ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿ, ವರ್ಷಾ ನಿರೂಪಿಸಿ, ಕಾರ್ಕಳ ಶ್ರೀ ಭುವನೇಂದ್ರ ಕಾಲೇಜಿನ ಕನ್ನಡ ಉಪನ್ಯಾಸಕ ರಾಮಾಂಜಿ ವಂದಿಸಿದರು.

# ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಿ: ಜಿ.ಲಕ್ಷ್ಮೀಕಾಂತ ರೆಡ್ಡಿ



**ಮೈಸೂರು: ಏ.24:–** ಪ್ರಧಾನ ಮಂತ್ರಿಗಳ 15 ಅಂಶಗಳಡಿ ಕಾರ್ಯಕ್ರಮದಡಿ ಅಲ್ಪಸಂಖ್ಯಾತರಿಗೆ ಇರುವ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ಪಾರದರ್ಶಕವಾಗಿ ತಲುಪಿಸುವ ಕಾರ್ಯವನ್ನು ಸಂಭಂದಪಟ್ಟ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮಾಡಬೇಕು ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದರು.

ಗುರುವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಾಗೂ ಸರ್ಕಾರದ ವಿವಿಧ ಇಲಾಖೆಗಳಿಂದ ಸಿಗುವ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸಬೇಕು. ಫಲಾನುಭವಿಗಳ ಆಯ್ಕೆ ಪಾರದರ್ಶಕವಾಗಿ ಇರಬೇಕು. ಸೌಲಭ್ಯ ನೀಡುವಲ್ಲಿ ಇರುವ ಮಾನದಂಡ ಅನುಸರಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಆಶ್ರಯ ಯೋಜನೆಯಡಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನಿವೇಶನ ರಹಿತರಿಗೆ ನಿವೇಶನ ನೀಡಲಾಗುವುದು. ಪಟ್ಟಣ ಪ್ರದೇಶದಲ್ಲಿ ಮನೆ ನಿರ್ಮಾಣ ಮಾಡಿ ಮನೆಗಳ ಹಂಚಿಕೆ ಮಾಡಲಾಗುವುದು. ನರಸಿಂಹರಾಜ ಕ್ಷೇತ್ರದಲ್ಲಿ ಮನೆಗಳ ನಿರ್ಮಾಣಕ್ಕೆ ಡಿಪಿಆರ್ ಮಾಡಿ ಸರ್ಕಾರಕ್ಕೆ ಕಳುಹಿಸಲಾಗಿದೆ. ಪಿಎಂ ಸ್ವ ನಿಧಿ ಯೋಜನೆಯಡಿ ಮಹಾನಗರ ಪಾಲಿಕೆಯಿಂದ ಸೌಲಭ್ಯ ಪಡೆಯಲು ಬೀದಿ ಬದಿ ವ್ಯಾಪಾರಿಗಳು 30 ಸಾವಿರ ಅರ್ಜಿಗಳು ಸಲ್ಲಿಕೆಯಾಗಿದ್ದು 22 ಸಾವಿರ ಜನರು ಸೌಲಭ್ಯ ಪಡೆದಿದ್ದಾರೆ ಎಂದು ತಿಳಿಸಿದರು.

ಸಮಿತಿಯ ಸದಸ್ಯರು ಮಾತನಾಡಿ, ಸಯ್ಯಾಜಿರಾವ್ ರಸ್ತೆಯ ಬನುಮಯ್ಯ ಕಾಲೇಜಿನ ಪಕ್ಕದಲ್ಲಿರುವ ಶಾಂತಿನಾಥ ಜೈನ ಬಸದಿಯ ಜಾಗದ ಗಡಿ ಗುರುತಿಸಿ ಕೊಡಬೇಕು. ಮೈಸೂರು ಜಿಲ್ಲೆಯನ್ನು ಮಾದಕ ವಸ್ತುಗಳ ಮುಕ್ತ ಜಿಲ್ಲೆಯನ್ನಾಗಿ ಮಾಡಬೇಕು. ಮುಸ್ಲಿಂ ಸಮುದಾಯದಲ್ಲಿ ಹೆಚ್ಚಿನ ಬಾಲಕಾರ್ಮಿಕರು ಇದ್ದು, ಪತ್ತೆ ಹಚ್ಚಿ ಸೂಕ್ತ ಕ್ರಮ ಕೈಗೊಳ್ಳಬೇಕು. ಮುದ್ರಾ ಯೋಜನೆಯಡಿ ಸಾಲ ಸೌಲಭ್ಯ ನೀಡಬೇಕು. ಸಾಲ ನೀಡುವಲ್ಲಿ ಸಿಬಿಲ್ ಇಲ್ಲ ಎಂದು ರಿಜೆಕ್ಟ್ ಮಾಡುತ್ತಾರೆ. ಸಾಲ ನೀಡುವಲ್ಲಿ ಸ್ಥಳೀಕರಣ ಮಾಡಬೇಕು ಎಂದು ಮನವಿ ಮಾಡಿದರು.

ಹಳ್ಳದ ಕೇರಿಗೆ ಮಹಾವೀರ ನಗರ ಎಂದು ಹೆಸರು ಇದ್ದು ಇಲ್ಲಿ ನಾಮಫಲಕ ಅಳವಡಿಸಬೇಕು. ಅಲ್ಪ ಸಂಖ್ಯಾತ ಸಮುದಾಯದ ನಿರುದ್ಯೋಗಿ ಯುವಕ ಯುವತಿಯರಿಗೆ ಕೌಶಲ್ಯ ತರಬೇತಿ ನೀಡಬೇಕು. ಗ್ರಾಮೀಣ ಭಾಗದ ಜನರಿಗೆ ಸೌಲಭ್ಯಗಳ ಬಗ್ಗೆ ಮಾಹಿತಿ ಇರುವುದಿಲ್ಲ ಆದ್ದರಿಂದ ವಿವಿಧ ಇಲಾಖೆಗಳಿಂದ ಅಲ್ಪಸಂಖ್ಯಾತ ಸಮುದಾಯದವರಿಗೆ ಇರುವ ಸೌಲಭ್ಯಗಳ ಕುರಿತು ಹೆಚ್ಚಿನ ಪ್ರಚಾರ ನೀಡಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಸಮಿತಿಯ ಸದಸ್ಯರಾದ ಸುರೇಶ್ ಕುಮಾರ್ ಜೈನ್, ಸುಭಾನುದ್ದೀನ್, ಫಾಜಿಲ್, ನಿಫ್ಟಿನ್, ಅಲ್ಪಸಂಖ್ಯಾತರ ಇಲಾಖೆಯ ಜಿಲ್ಲಾ ಅಧಿಕಾರಿ ಶಿಲ್ಪಾ.ಕೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಚಿಂತನೆ ದೂರದೃಷ್ಟಿ ಸ್ವಉದ್ಯೋಗದ ಮೆಟ್ಟಿಲು: ಡಾ. ಉದಯ್ ಶೆಟ್ಟಿ



**ಬ್ರಹ್ಮಾವರ:** ಇಲ್ಲಿನ ಗ್ರಾಮಾಭಿವೃದ್ಧಿ ಮತ್ತು ಸ್ವ ಉದ್ಯೋಗ ತರಬೇತಿ (ರುಡ್‌ಸೆಟ್) ಸಂಸ್ಥೆಯ ಆಶ್ರಯದಲ್ಲಿ ಅಣಬೆ ಬೇಸಾಯ ಮತ್ತು ಬ್ಯೂಟಿ ಪಾರ್ಲರ್ ತರಬೇತಿ ಕಾರ್ಯಕ್ರಮವನ್ನು ಜಿಪಂ ಯೋಜನಾ ನಿರ್ದೇಶಕ ಡಾ. ಉದಯ್ ಶೆಟ್ಟಿ ಅವರು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು ಗ್ರಾಮೀಣ ಯುವಜನತೆಗೆ ಸ್ವಉದ್ಯೋಗ ಆರಂಭಿಸಲು ಉಚಿತ ತರಬೇತಿ, ಊಟ ಮತ್ತು ವಸತಿಯೊಂದಿಗೆ ಯುವಕರನ್ನು ಆರ್ಥಿಕವಾಗಿ ಸ್ವಾವಲಂಬಿಗಳಾಗಿಸಲು ರುಡ್‌ಸೆಟ್ ಮಹತ್ವದ ವೇದಿಕೆಯನ್ನು ಒದಗಿಸುತ್ತಿರುವುದನ್ನು ಶ್ಲಾಘಿಸಿದರು. ಚಿಂತನೆ ಮತ್ತು ದೂರದೃಷ್ಟಿಯ ಪಕ್ವತೆ ಇದ್ದರೆ ಯಾವುದೇ ವ್ಯವಹಾರದಲ್ಲಿ ಯಶಸ್ಸು ಸಾಧಿಸಬಹುದು. ಹೊಸತನದ ಆಲೋಚನೆಗಳು ನಮ್ಮನ್ನು ಯಶಸ್ಸಿನ ಶಿಖರಕ್ಕೆ ಕೊಂಡೊಯ್ಯುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ಮುಖ್ಯ ಅತಿಥಿಯಾದ ಲೀಡ್ ಡಿಸ್ಟ್ರಿಕ್ಟ್ ಮ್ಯಾನೇಜರ್ ಹರೀಶ್ ಜಿ ಅವರು ಸರ್ಕಾರದ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಿದರು. ತರಬೇತಿ ನಂತರ ಬ್ಯಾಂಕಿನ ಮೂಲಕ ಹಣಕಾಸಿನ ನೆರವು ಪಡೆದು ಸ್ವ ಉದ್ಯೋಗ ಆರಂಭಿಸಬೇಕು ಎಂದು ಸಲಹೆ ನೀಡಿದರು. ಬ್ಯಾಂಕಿಂಗ್ ಸಂಬಂಧಿತ ಸಮಸ್ಯೆಗಳು ಎದುರಾದಲ್ಲಿ ತಮ್ಮ ಗಮನಕ್ಕೆ ತಂದು ಪರಿಹರಿಸಿಕೊಳ್ಳಬಹುದು ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ರುಡ್ ಸೆಟ್ ಸಂಸ್ಥೆಯ ನಿರ್ದೇಶಕರಾದ ಡಾ. ಬೊಮ್ಮಯ್ಯ ಎಂ. ಅವರು, ತರಬೇತಿಯನ್ನು ಶ್ರದ್ಧೆಯಿಂದ ಪಡೆದುಕೊಂಡು, ಸಂಸ್ಥೆಯ ಸೌಲಭ್ಯಗಳನ್ನು ಇತರರಿಗೂ ಹಂಚಿಕೊಳ್ಳುವ ಮೂಲಕ ದೇಶದ ಆರ್ಥಿಕ ಅಭಿವೃದ್ಧಿಗೆ ಕೈಜೋಡಿಸೋಣ ಎಂದು ಶಿಬಿರಾರ್ಥಿಗಳಿಗೆ ಕರೆ ನೀಡಿದರು. ಕಾರ್ಯಕ್ರಮವನ್ನು ಉಪನ್ಯಾಸಕಿ ಚೈತ್ರ ಕೆ. ನಿರೂಪಿಸಿದರು. ಹಿರಿಯ ಉಪನ್ಯಾಸಕ ಸಂತೋಷ್ ಶೆಟ್ಟಿ ಸ್ವಾಗತಿಸಿದರು. ಹಿರಿಯ ಕಚೇರಿ ಸಹಾಯಕ ರವಿ ವಂದಿಸಿದರು.

# ಗ್ರಾಮೀಣಾಭಿವೃದ್ಧಿಗೆ ಕ್ರಿಯೇಟಿವ್ ಸಂಸ್ಥೆ ಕೊಡುಗೆ: ಸುನಿಲ್ ಮೆಚ್ಚುಗೆ

**ಕಾರ್ಕಳ:** ಕ್ರಿಯೆಟಿವ್ ಶಿಕ್ಷಣ ಸಂಸ್ಥೆಗಳು ಸೃಜನಾತ್ಮಕ ಚಟುವಟಿಕೆಗಳಿಗೆ ಹೊಸ ರೂಪ ನೀಡುವ ಮೂಲಕ ಗ್ರಾಮಾಭಿವೃದ್ಧಿಗೆ ಸಹಕಾರ ನೀಡುತ್ತಿದೆ ಎಂದು ಕಾರ್ಕಳ ಶಾಸಕ ವಿ. ಸುನಿಲ್ ಕುಮಾರ್ ಹೇಳಿದರು.ಕಾರ್ಕಳದ ಹಿರ್ಗಾನದಲ್ಲಿರುವ ಮಾವಿನಕಟ್ಟೆಯ ಪಿಂಟೋ ಅವೆನ್ಯೂನಲ್ಲಿ ಸ್ಥಾಪಿಸಲಾದ ಕ್ರಿಯೇಟಿವ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯನ್ನು ಉದ್ಘಾಟಿಸಿ, ಬಳಿಕ ಕಾಲೇಜಿನ ಸಪ್ತಸ್ವರ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕ್ರಿಯೇಟಿವ್ ಕಾಲೇಜು ರಾಜ್ಯದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾಗಿ ಬೆಳೆಯುತ್ತಿದ್ದು, ಶೈಕ್ಷಣಿಕ ಕ್ಷೇತ್ರದ ಜೊತೆಗೆ ಸಮಾಜಮುಖಿ ಕಾರ್ಯಗಳಲ್ಲಿಯೂ ಪ್ರೇರಣೆಯಾಗುತ್ತಿದೆ. ಪುಸ್ತಕ ಮನೆ ಮೂಲಕ ಸುಮಾರು 85 ಸಾವಿರಕ್ಕೂ ಹೆಚ್ಚು ಪುಸ್ತಕಗಳ ವಿತರಣೆಯಾಗಿದ್ದು, ಯುವ ಸಮುದಾಯಕ್ಕೆ ಸ್ಫೂರ್ತಿದಾಯಕ ಕಾರ್ಯಗಳನ್ನು ಮಾಡುತ್ತಿದೆ ಎಂದರು.ಮುನಿಯಾಲು ಉದಯ ಕೃಷ್ಣಯ್ಯ ಶೆಟ್ಟಿ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಉದಯ್ ಕುಮಾರ್ ಶೆಟ್ಟಿ ಮಾತನಾಡಿ, ಕ್ರಿಯೇಟಿವ್ ಸಂಸ್ಥೆ ಗುಣಮಟ್ಟದ ಶಿಕ್ಷಣ ಮತ್ತು ಸೃಜನಾತ್ಮಕ ಚಟುವಟಿಕೆಗಳ ಮೂಲಕ ಹೆಸರುವಾಸಿಯಾಗಿದೆ ಎಂದರು.ಸನ್ಮಾನ ಸ್ವೀಕರಿಸಿ ಮಾತನಾಡಿದ ಉಡುಪಿ ಜಿಲ್ಲಾ ಸಹಕಾರಿ ಸಂಘಗಳ ಉಪನಿಬಂಧಕ ಲಾವಣ್ಯ ಕೆ.ಆರ್, ಸಹಕಾರಿ ಸಂಸ್ಥೆಗಳು ಸಾಮಾಜಿಕ ಸೇವೆಗಳ ಮೂಲಕ ರಾಷ್ಟ್ರಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದರು.

ರಾಜ್ಯ ಕ್ರಷರ್ ಅಸೋಸಿಯೇಶನ್ ಅಧ್ಯಕ್ಷ ರವೀಂದ್ರ ಶೆಟ್ಟಿ ಮಾತನಾಡಿ, ಶಿಕ್ಷಣ ಸಂಸ್ಥೆಗಳ ಮೂಲಕ ಧಾರ್ಮಿಕ, ಆರೋಗ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಮಾಜ ನಿರ್ಮಾಣದ ಕಾರ್ಯ ನಡೆಯುತ್ತಿದೆ ಎಂದರು.ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹಿರ್ಗಾನ ಸಂತೋಷ್ ಶೆಟ್ಟಿ ಮಾತನಾಡಿದರು.ಕ್ರಿಯೇಟಿವ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಅಧ್ಯಕ್ಷ ಡಾ. ಗಣನಾಥ್ ಶೆಟ್ಟಿ ಸ್ವಾಗತಿಸಿ, ಕ್ರಿಯೇಟಿವ್ ಸಂಸ್ಥೆ 642 ಜನರಿಗೆ ಉದ್ಯೋಗ ಒದಗಿಸಿದೆ. ಬಂಡವಾಳ ಸಂಗ್ರಹಿಸಿ ಸೇವೆ ನೀಡುವ ಮೂಲಕ ಗ್ರಾಮಾಭಿವೃದ್ಧಿಗೆ ಕೊಡುಗೆ ನೀಡುತ್ತಿದೆ. ಸುಮಾರು 5 ಕೋಟಿ ರು.ಗಳನ್ನು ಉಚಿತ




ಶಿಕ್ಷಣಕ್ಕೆ ವಿನಿಯೋಗಿಸಿದ್ದು, ಪುಸ್ತಕ ಮನೆ ಮೂಲಕ ಲಕ್ಷಾಂತರ ಪ್ರಕಟಣೆಗಳನ್ನು ವಿತರಿಸಲಾಗಿದೆ. ಸಿಇಟಿ, ನೀಟ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಪುಸ್ತಕಗಳನ್ನು ಸರ್ಕಾರಿ ಕಾಲೇಜುಗಳಿಗೆ ನೀಡಲಾಗುತ್ತಿದೆ ಎಂದರು.ಅಧ್ಯಕ್ಷತೆ ವಹಿಸಿದ್ದ ಆದರ್ಶ ಎಂ.ಕೆ. ಮಾತನಾಡಿ, ಗ್ರಾಮದಲ್ಲಿ ಸಹಕಾರವೇ ಮುಖ್ಯ, ಸಹಕಾರದಿಂದ ಬದುಕೋಣ ಎಂದರು.

ವ್ಯವಸಾಯ ಸೇವಾ ಸಹಕಾರ ಸಂಘದ ಅಧ್ಯಕ್ಷ ಸಿರಿಯಣ್ಣ ಶೆಟ್ಟಿ ಶುಭಾಶಯ ಕೋರಿದರು.

ಉಪಾಧ್ಯಕ್ಷರಾದ ಅಶ್ವತ್ ಎಸ್.ಎಲ್., ವಿಮಲ್ ರಾಜ್, ಅಮೃತ್ ರೈ, ವಿದ್ವಾನ್ ಗಣಪತಿ ಭಟ್, ರವಿ ಹೆಗಡೆ, ಆಶಾ ಕೆ.ಎಲ್, ಗಣಪತಿ ಭಟ್., ಸುನೀಲ್ ಶೆಟ್ಟಿ, ಅಕ್ಷತಾ, ರಶ್ಮಿ, ಹರೀಶ್ ಮತ್ತಿತರರಿದ್ದರು.

ಧನಸಹಾಯ ವಿತರಣೆ: ಈ ಸಂದರ್ಭದಲ್ಲಿ ಬಿ.ಎಂ. ಶಾಲೆಗೆ ಹಾಗೂ ಅಗತ್ಯವಿರುವವರಿಗೆ ಧನಸಹಾಯ ವಿತರಿಸಲಾಯಿತು. ಷೇರುದಾರರಿಗೆ ಪ್ರಮಾಣಪತ್ರಗಳು ಮತ್ತು ಸಾಲ ಸೌಲಭ್ಯಗಳನ್ನು ನೀಡಲಾಯಿತು. ನವಿನ್ ಪಿಂಟೋ, ಸುನೀಲ್ ಕುಮಾರ್ ಜಿ., ಯೋಗೀಶ್ ಇವರುಗಳನ್ನು ಗೌರವಿಸಲಾಯಿತು.ಉಪನ್ಯಾಸಕ ಲೋಹಿತ್ ನಿರೂಪಿಸಿದರು. ಸೊಸೈಟಿಯ ಕಾರ್ಯನಿರ್ವಾಹಣಾಧಿಕಾರಿ ರವಿ ಹೆಗಡೆ ವಂದಿಸಿದರು.

# ಬಂಗಾಳದಲ್ಲಿ ಬಿಜೆಪಿಗೆ 110 ಸ್ಥಾನ



**ಕೋಲ್ಕತ್ತಾ/ನವದೆಹಲಿ, ಏ. 24:**ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆಯ ಮೊದಲ ಹಂತದಲ್ಲಿ ದಾಖಲೆ ಮಟ್ಟದ ಮತದಾನ ನಡೆದ ಹಿನ್ನೆಲೆ, ಕೇಂದ್ರ ಗೃಹ ಸಚಿವ ಅಮಿತ್ ಶಾ ಬಿಜೆಪಿ ಪರ ಜನಮತ ಹರಿದಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಇದೇ ವೇಳೆ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅಧಿಕಾರದಿಂದ ಹೊರ ಹೋಗಲಿದ್ದಾರೆ ಎಂದು ಅವರು ಹೇಳಿದ್ದಾರೆ.

ಕೋಲ್ಕತ್ತಾದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, “ಮೊದಲ ಹಂತದ ಮತದಾನದ ಮೂಲಕವೇ ಜನರು ತಮ್ಮ ಭವಿಷ್ಯವನ್ನು ನಿರ್ಧರಿಸಿದ್ದಾರೆ. ಪ್ರಧಾನಿ ನರೇಂದ್ರಮೋದಿ ನೇತೃತ್ವದ ಅಭಿವೃದ್ಧಿಗೆ ಬೆಂಬಲ ವ್ಯಕ್ತವಾಗಿದೆ. ಮತದಾನದ ಪ್ರಮಾಣವೇ ‘ದೀದಿ’ ಹೊರ ಹೋಗುತ್ತಿದ್ದಾರೆ ಎಂಬುದಕ್ಕೆ ಸೂಚನೆ ನೀಡುತ್ತಿದೆ” ಎಂದು ಹೇಳಿದರು.

ಮೊದಲ ಹಂತದ 152 ಕ್ಷೇತ್ರಗಳಲ್ಲಿ ಬಿಜೆಪಿ 110ಕ್ಕಿಂತ ಹೆಚ್ಚು ಸ್ಥಾನಗಳನ್ನು ಗೆಲ್ಲಲಿದೆ ಎಂದು ಅವರು ಭವಿಷ್ಯ ನುಡಿದರು. “ಎರಡನೇ ಹಂತದ ಬಳಿಕವೇ ನಾವು ಸರ್ಕಾರ ರಚಿಸುವ ಸ್ಥಿತಿಗೆ ಬರಲಿದ್ದೇವೆ” ಎಂದು ಶಾ ಹೇಳಿದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಪುನಃಸ್ಥಾಪನೆ ಮಾಡುವುದಾಗಿ ಭರವಸೆ ನೀಡಿದ ಅವರು, “ಬಿಜೆಪಿ ಅಧಿಕಾರಕ್ಕೆ ಬಂದರೆ ಭಯರಹಿತ ಬಂಗಾಳ, ಭ್ರಷ್ಟಾಚಾರ ಮತ್ತು ಅತಿಕ್ರಮಣ ಮುಕ್ತ ಆಡಳಿತ, ಯುವಕರಿಗೆ ಉದ್ಯೋಗ ಹಾಗೂ ಮಹಿಳೆಯರ ಸುರಕ್ಷತೆ ನಮ್ಮ ಮೊದಲ ಆದ್ಯತೆ” ಎಂದು ಹೇಳಿದರು.

# ಷೇರು ಮಾರುಕಟ್ಟೆ ಕುಸಿತ



**ನವದೆಹಲಿ,ಏ.23–**ಇಂದು ಭಾರತೀಯ ಷೇರು ಸೂಚ್ಯಂಕಗಳಾದ ಸೆನ್ಸೆಕ್ಸ್ ಮತ್ತು ಗಿಫ್ಟ್ ನಿಫ್ಟಿಯಲ್ಲಿನ ತೀವ್ರ ಕುಸಿತ ಮತ್ತು ಬ್ರೆಂಟ್ ತೈಲ ಬೆಲೆಗಳ ಏರಿಕೆಯ ಮಧ್ಯೆ ಎಚ್ಚರಿಕೆಯ ಜಾಗತಿಕ ಸೂಚನೆಗಳನ್ನು ಅನುಸರಿಸಿ ಕೆಂಪು ಬಣ್ಣದಲ್ಲಿ ತೆರೆದವು.

ಭಾರತೀಯ ಷೇರು ಮಾರುಕಟ್ಟೆ ಆರಂಭವಾದ ತಕ್ಷಣ ಕುಸಿತ ಕಂಡಿದೆ. ಬಾಂಬೆ ಷೇರು ವಿನಿಮಯ ಕೇಂದ್ರದ 30 ಷೇರುಗಳ ಸೆನ್ಸೆಕ್ಸ್ ಹಿಂದಿನ ಮುಕ್ತಾಯಕ್ಕಿಂತ 800 ಕ್ಕೂ ಹೆಚ್ಚು ಅಂಕಗಳಷ್ಟು ಕುಸಿದರೆ, ರಾಷ್ಟ್ರೀಯ ಷೇರು ವಿನಿಮಯ ಕೇಂದ್ರದ ನಿಫ್ಟಿ ಸೂಚ್ಯಂಕ 200 ಕ್ಕೂ ಹೆಚ್ಚು ಅಂಕಗಳಷ್ಟು ಕುಸಿದಿದೆ. ಕಚ್ಚಾ ತೈಲ ಬೆಲೆಗಳ ಏರಿಕೆಯೊಂದಿಗೆ ಹಾರ್ಮುಜ್ ಜಲಸಂಧಿಯ ಕುರಿತು ಅಮೆರಿಕ ಮತ್ತು ಇರಾನ್ ನಡುವಿನ ಉದ್ವಿಗ್ನತೆ ಮತ್ತೊಮ್ಮೆ ಮಾರುಕಟ್ಟೆ ಮೇಲೆ ಪರಿಣಾಮ ಬೀರಿದೆ.
ಇಂದು ಬಿಎಸ್‌ಇ ಸೆನ್ಸೆಕ್ಸ್ ವಹಿವಾಟು ಆರಂಭಿಸಿ

, ಹಿಂದಿನ 78,516 ಅಂಕಗಳಿಂದ 77,983 ಅಂಕಗಳಿಗೆ ಕುಸಿದಿದೆ. ಕೆಲವೇ ನಿಮಿಷಗಳಲ್ಲಿ, ಸೂಚ್ಯಂಕದ ಕುಸಿತ ವೇಗಗೊಂಡಿತು ಮತ್ತು ಸೆನ್ಸೆಕ್ಸ್ 823 ಅಂಕಗಳ ಕುಸಿತದೊಂದಿಗೆ 77,693 ಕ್ಕೆ ವಹಿವಾಟು ನಡೆಸಿತು.

ಸೆನ್ಸೆಕ್ಸ್ ಮಾತ್ರವಲ್ಲದೆ, ಎನ್‌ಎಸ್‌ಇ ನಿಫ್ಟಿ ಕೂಡ ಇದೇ ರೀತಿಯ ಪ್ರವೃತ್ತಿಯನ್ನು ಅನುಸರಿಸಿತು. 50 ಷೇರುಗಳ ಸೂಚ್ಯಂಕವು 24,202 ರಲ್ಲಿ ಪ್ರಾರಂಭವಾಯಿತು, ಇದು ಅದರ ಹಿಂದಿನ ಮುಕ್ತಾಯದ 24,378 ಕ್ಕಿಂತ ಕಡಿಮೆಯಾಗಿತ್ತು, ಮತ್ತು ನಂತರ 24,134 ಕ್ಕೆ ಇಳಿಯಿತು.ಜಾಗತಿಕ ಸೂಚನೆಗಳು ಈಗಾಗಲೇ ಷೇರು ಮಾರುಕಟ್ಟೆ ಕುಸಿತದ ಭೀತಿಯನ್ನು ಹೆಚ್ಚಿಸಿದ್ದವು. ಕಳೆದ ವಹಿವಾಟಿನ ದಿನದಂದು ಯುಎಸ್ ಷೇರು ಮಾರುಕಟ್ಟೆಗಳು ಕೆಂಪು ಬಣ್ಣದಲ್ಲಿ ಮುಚ್ಚಲ್ಪಟ್ಟಿದ್ದರೆ, ಗುರುವಾರ ಪ್ರಾರಂಭವಾದಾಗ ಏಷ್ಯಾದ ಮಾರುಕಟ್ಟೆಗಳು ವಿಭಜನೆಯಲ್ಲಿ ಕಂಡುಬಂದವು.

ಜಪಾನ್‌ನ ನಿಕ್ಕಿ ಸೂಚ್ಯಂಕವು ಆರಂಭಿಕ ವಹಿವಾಟಿನಲ್ಲಿ ಕುಸಿದು 58,952 ಕ್ಕೆ ವಹಿವಾಟು ನಡೆಸುತ್ತಿದ್ದು, ಈ ವರದಿ ಬರೆಯುವ ಸಮಯದಲ್ಲಿ 650 ಪಾಯಿಂಟ್‌ಗಳ ಕುಸಿತ ಕಂಡಿದೆ. ಹಾಂಗ್ ಕಾಂಗ್‌ನ ಹ್ಯಾಂಗ್ ಸೆಂಗ್ ಸೂಚ್ಯಂಕವು ಸಹ ಸುಮಾರು 300 ಪಾಯಿಂಟ್‌ಗಳ ಕುಸಿತದೊಂದಿಗೆ 25,889 ಕ್ಕೆ ವಹಿವಾಟು ನಡೆಸುತ್ತಿದೆ. ಏಷ್ಯಾದ ಇತರ ಷೇರು ಮಾರುಕಟ್ಟೆಗಳಲ್ಲಿ, ದಕ್ಷಿಣ ಕೊರಿಯಾದ ಕೋಸ್ಪಿ ಸೂಚ್ಯಂಕವು ಸುಮಾರು 1 ಪ್ರತಿಶತದಷ್ಟು ಕುಸಿತ ಕಂಡಿದೆ.

ಕಚ್ಚಾ ತೈಲ ಬೆಲೆಗಳಿಂದ ಮಾರುಕಟ್ಟೆ ತತ್ತರಿಸಿದೆ:
ಷೇರು ಮಾರುಕಟ್ಟೆಯಲ್ಲಿನ ಈ ತೀವ್ರ ಕುಸಿತಕ್ಕೆ ಪ್ರಮುಖ ಕಾರಣವೆಂದರೆ ಅಮೆರಿಕ–ಇರಾನ್ ಉದ್ವಿಗ್ನತೆಯ ಮಧ್ಯೆ ಕಚ್ಚಾ ತೈಲ ಬೆಲೆಗಳಲ್ಲಿನ ಹಠಾತ್ ಏರಿಕೆ, ಇದು ಭಾರತದಲ್ಲಿ ಮಾತ್ರವಲ್ಲದೆ ಪ್ರಪಂಚದಾದ್ಯಂತ ಪರಿಣಾಮ ಬೀರಿದೆ.ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲದ ಬೆಲೆ ಮತ್ತೊಮ್ಮೆ $100 ದಾಟಿದೆ. ಬ್ರೆಂಟ್ ಕಚ್ಚಾ ತೈಲ ಬೆಲೆಗಳು ಸುಮಾರು ಶೇಕಡಾ 8 ರಷ್ಟು ಏರಿಕೆಯಾಗಿ ಪ್ರತಿ ಬ್ಯಾರೆಲ್‌ಗೆ $104 ರ ಹತ್ತಿರ ವಹಿವಾಟು ನಡೆಸುತ್ತಿದ್ದವು.

# ಚುನಾವಣೆ ನಂತರದ ಮಾರ್ಗಸೂಚಿ ಪ್ರಕಟಿಸಿದ ಚುನಾವಣಾ ಆಯೋಗ

**ಕೋಲ್ಕತ್ತಾ, ಏ. 24 (ಪಿಟಿಐ)** ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಗೆ ಚುನಾವಣಾ ಆಯೋಗವು ಹೊಸ ಚುನಾವಣಾ ನಂತರದ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಮತದಾನ ಮುಗಿದ ನಂತರ ಕಣ್ಗಾವಲು ಕ್ಯಾಮೆರಾಗಳು ಮತ್ತು ವೀಡಿಯೊ ಡೇಟಾವನ್ನು ನಿರ್ವಹಿಸಲು ಕಟ್ಟುನಿಟ್ಟಾದ ಪ್ರೋಟೋಕಾಲ್‌ಗಳನ್ನು ನಿಗದಿಪಡಿಸಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಹೊಸ ಮಾರ್ಗಸೂಚಿಗಳ ಪ್ರಕಾರ, ಮತದಾನ ಮುಗಿದ ತಕ್ಷಣ ಮತಗಟ್ಟೆ ಕ್ಯಾಮೆರಾಗಳಲ್ಲಿ ಬಳಸಲಾದ ಕಾರ್ಡ್‌ಗಳನ್ನು ತೆಗೆದುಹಾಕಲಾಗುವುದಿಲ್ಲ ಮತ್ತು ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ಯಾಮೆರಾಗಳನ್ನು ತೆಗೆದುಹಾಕುವ ಅನುಮತಿ ನೀಡಲಾಗುವುದು, ನಂತರ ಅದು ವಲಯ ಅಧಿಕಾರಿಯ ಮೇಲ್ವಿಚಾರಣೆಯಲ್ಲಿರಬೇಕು ಎಂದು ಅವರು ಹೇಳಿದರು.

ಕಾರ್ಡ್‌ಗಳನ್ನು ಸಹಾಯಕ ಚುನಾವಣಾ ಅಧಿಕಾರಿಯ ಸಮ್ಮುಖದಲ್ಲಿ ಗೊತ್ತುಪಡಿಸಿದ ಡೇಟಾ ಸಂಗ್ರಹಣೆ ಮತ್ತು ಸ್ವಿಕರಿಸುವ ಕೇಂದ್ರದಲ್ಲಿ ಮಾತ್ರ ತೆಗೆದುಹಾಕಬಹುದು ಎಂದು ಅವರು ಹೇಳಿದರು.ಮತದಾನದ ಸಮಯದಲ್ಲಿ ಸೆರೆಹಿಡಿಯಲಾದ ಎಲ್ಲಾ ವೀಡಿಯೊ ದೃಶ್ಯಗಳನ್ನು ಸುರಕ್ಷಿತವಾಗಿ ಮತ್ತು ವ್ಯವಸ್ಥಿತವಾಗಿ ಸಂರಕ್ಷಿಸಬೇಕು ಎಂದು ಚುನಾವಣಾ ಅಧಿಕಾರಿ ಹೇಳಿದರು. ಮತದಾನ ಪಕ್ಷದ ಯಾವುದೇ ಸದಸ್ಯರು ಅಥವಾ




ಬೂತ್ ಮಟ್ಟದ ಅಧಿಕಾರಿ ಕ್ಯಾಮೆರಾ ಉಪಕರಣಗಳನ್ನು ಸಂಪೂರ್ಣವಾಗಿ ತೆಗೆದುಹಾಕುವವರೆಗೆ ಮತಗಟ್ಟೆಯಿಂದ ಹೊರಹೋಗುವಂತಿಲ್ಲ ಎಂದು ಅವರು ಹೇಳಿದರು.ಏತನ್ಮಧ್ಯೆ, ಎರಡನೇ ಹಂತದ ಮತದಾನಕ್ಕಾಗಿ ವೆಬ್‌ಕಾಸ್ಟಿಂಗ್‌ನ ಪ್ರಾಯೋಗಿಕ ಪರೀಕ್ಷೆಯು ಇಂದು ಬೆಳಿಗ್ಗೆ 10 ಗಂಟೆಗೆ ಪ್ರಾರಂಭವಾಗಿದೆ ಎಂದು ಅಧಿಕಾರಿ ಹೇಳಿದರು.ಮೂರು ಪಾಳಿಗಳಲ್ಲಿ ಈ ವ್ಯಾಯಾಮವನ್ನು ನಡೆಸಲಾಗುವುದು ಎಂದು ಅವರು ಹೇಳಿದರು.294 ಸದಸ್ಯ ಬಲದ ಪಶ್ಚಿಮ ಬಂಗಾಳ ವಿಧಾನಸಭೆಗೆ ಮೊದಲ ಹಂತದ ಚುನಾವಣೆ ಗುರುವಾರ ನಡೆದರೆ, ಎರಡನೇ ಸುತ್ತಿನ ಚುನಾವಣೆ ಏಪ್ರಿಲ್ 29 ರಂದು ನಡೆಯಲಿದೆ. ಮೇ 4 ರಂದು ಮತಗಳ ಎಣಿಕೆ ನಡೆಯಲಿದೆ.

# ಅರ್ಜುನ ಕಾಲೇಜ್ ವಿದ್ಯಾರ್ಥಿಗಳ ಸಾಧನೆ


ಅನಮೋಲ್


ಕೇದಾರ ಜೋಶಿ


ದರ್ಶನ್


ಅನೀಶ


ಧ್ರುವಂತ್


ವಿನೀತ


ಆಕಾಶ


ಪ್ರೀತಮ್


ಕಾರ್ತಿಕ್


ಈಶಾನ್

**ಧಾರವಾಡ,ಏ24:** ರಾಷ್ಟ್ರೀಯ ಪರೀಕ್ಷಾ ಮಂಡಳಿ ನಡೆಸುವ ಜೆಇಇ 2ನೇ ಆವೃತ್ತಿಯಲ್ಲಿ ನಗರದ ಅರ್ಜುನ ವಿಜ್ಞಾನ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿದ್ದಾರೆ. ಅನಮೋಲ್ ಪ್ರಭು (99.90 ಪರ್ಸೆಂಟೈಲ್) ಆಲ್ ಇಂಡಿಯಾ ರ್‍ಯಾಂಕಿನಲ್ಲಿ (ಎಐಆರ್) 1,705ನೇ ಸ್ಥಾನ ಪಡೆದಿದ್ದಾನೆ. ಕೇದಾರ ಜ್ಯೋತಿಶಿ 99.84 ಪರ್ಸೆಂಟೈಲ್ (ಎಐಆರ್ 2,688), ದರ್ಶನ್ ಭಟ್ 99.60 ಪರ್ಸೆಂಟೈಲ್ (6,468) ಅನೀಶ ನಾಯ್ಕ 99.56 ಪರ್ಸೆಂಟೈಲ್ (7,076) ಸಾಧನೆಗೈದಿದ್ದಾರೆ.

ಧ್ರುವಂತ್ ಎಸ್.ಎಂ 98.52 ಪರ್ಸೆಂಟೈಲ್, ವಿನೀತ ಚವಾಣ್ 98.04 ಪರ್ಸೆಂಟೈಲ್, ಆಕಾಶ ರಾಥೋಡ್ 97.61 ಪರ್ಸೆಂಟೈಲ್, ಪ್ರೀತಮ್ ಚೌಹಾನ್ 96.46 ಪರ್ಸೆಂಟೈಲ್, ಕಾರ್ತಿಕ್ ಭಜಂತ್ರಿ 96.38 ಪರ್ಸೆಂಟೈಲ್, ಈಶಾನ್ ಶಾನಭಾಗ 96.08 ಪರ್ಸೆಂಟೈಲ್, ನಂದನ್ ಹೆಗ್ಡೆ 95.39 ಪರ್ಸೆಂಟೈಲ್, ರಜತ್ ಭಟ್ 95.36 ಪರ್ಸೆಂಟೈಲ್, ಸೃಜನ್ ಪಾಟೀಲ 94.62 ಪರ್ಸೆಂಟೈಲ್, ಪ್ರಣತಿ ಮೆಣಸುಮನೆ 94.37 ಪರ್ಸೆಂಟೈಲ್, ಸಿಂಚನಾ ಭಟ್ 93.92 ಪರ್ಸೆಂಟೈಲ್, ಭಾರ್ಗವ ಹೆಬ್ಬಾರ 93.62 ಪರ್ಸೆಂಟೈಲ್, ಪ್ರಗತಿ ನರೋಣಿ 93.40 ಪರ್ಸೆಂಟೈಲ್, ಅನನ್ಯ ಪೂಜಾರ 93.11 ಪರ್ಸೆಂಟೈಲ್, ನಿಹಾಲ್ ಗಳಗಿ 92.30 ಪರ್ಸೆಂಟೈಲ್, ಸುಶಾಂತ್ ನಾಯ್ಕ 92.23 ಪರ್ಸೆಂಟೈಲ್, ಪೂರ್ವಿ ಹೆಗಡೆ 92.04 ಪರ್ಸೆಂಟೈಲ್, ಪ್ರೀತಮ್ ಯದಳ್ಳಿ 91.70 ಪರ್ಸೆಂಟೈಲ್, ಮಾನಸ ದೇಶಪಾಂಡೆ 91.52 ಪರ್ಸೆಂಟೈಲ್, ಆದರ್ಶ ಭಟ್ 91.44 ಪರ್ಸೆಂಟೈಲ್, ಅಪೂರ್ವ ಹೆಗಡೆ 90.14 ಪರ್ಸೆಂಟೈಲ್, ಸಚಿನ್ ಜ್ಯೋತಿಶಿ 90.85 ಪರ್ಸೆಂಟೈಲ್, ನಿಶಾಂತ್ ನಂದವಾಡಗಿ 90.62 ಪರ್ಸೆಂಟೈಲ್ ಅಂಕ ಗಳಿಸಿದ್ದಾರೆ.

ಸಾಧಕ ವಿದ್ಯಾರ್ಥಿಗಳನ್ನು ಸಂಸ್ಥೆಯ ಪ್ರಾಚಾರ್ಯರು ಹಾಗೂ ಸಿಬ್ಬಂದಿ ಅಭಿನಂದಿಸಿದ್ದಾರೆ.

# ಆರ್‌ಎಸ್‌ಎಸ್ ಕು ಕ್ಲುಕ್ಸ್ ಕ್ಲಾನ್‌ನ ಭಾರತೀಯ ಅವೃತ್ತಿಯಲ್ಲ ; ದತ್ತಾತ್ರೇಯ ಹೊಸಬಾಳೆ




**ವಾಷಿಂಗ್ಟನ್,ಏ. 24 (ಪಿಟಿಐ)** ಆರ್‌ಎಸ್‌ಎಸ್ ಅಮೆರಿಕದ ಶ್ವೇತ ಪ್ರಾಬಲ್ಯವಾದಿ ಗುಂಪಿನ ಕು ಕ್ಲುಕ್ಸ್ ಕ್ಲಾನ್‌ನ ಭಾರತೀಯ ಆವೃತ್ತಿಯಲ್ಲ ಎಂದು ಆರ್‌ಎಸ್‌ಎಸ್ ಪ್ರಧಾನ ಕಾರ್ಯದರ್ಶಿ ದತ್ತಾತ್ರೆಯ ಹೊಸಬಾಳೆ ಸ್ಪಷ್ಟಪಡಿಸಿದ್ದಾರೆ.

ಹಡ್ಸನ್ ಇನ್‌ಸ್ಟಿಟ್ಯೂಟ್ ಆಯೋಜಿಸಿದ್ದ ನ್ಯೂ ಇಂಡಿಯಾ ಸಮ್ಮೇಳನದಲ್ಲಿ ನಡೆದ ಸಂವಾದಾತ್ಮಕ ಅಧಿವೇಶನದಲ್ಲಿ ಮಾತನಾಡಿದ ಹೊಸಬಾಳೆ, ಅಮೆರಿಕದಲ್ಲಿ ಭಾರತದ ಬಗ್ಗೆ ತಪ್ಪು ತಿಳುವಳಿಕೆಗಳಂತೆಯೇ ಆರ್‌ಎಸ್‌ಎಸ್ ಬಗ್ಗೆ ತಪ್ಪು ಕಲ್ಪನೆಗಳಿವೆ ಎಂದು ಹೇಳಿದರು.

ದಶಕಗಳಿಂದ, ತಿಳಿದೋ ಅಥವಾ ತಿಳಿಯದೆಯೋ ಕಾರ್ಯಸೂಚಿಯ ಭಾಗವಾಗಿ ಅಥವಾ ಇನ್ನಾವುದೇ ರೀತಿಯಲ್ಲಿ ನಿರ್ಮಿಸಲಾದ ನಿರೂಪಣೆಯೆಂದರೆ, ಆರ್‌ಎಸ್‌ಎಸ್ ಹಿಂದೂ ಪ್ರಾಬಲ್ಯವಾದಿ ಸಂಘಟನೆಯಾಗಿದೆ ಅಥವಾ ಅದು ಕ್ರಿಶ್ಚಿಯನ್ ವಿರೋಧಿ, ಅಲ್ಪಸಂಖ್ಯಾತ ವಿರೋಧಿ, ಅಭಿವೃದ್ಧಿ ವಿರೋಧಿ ಮತ್ತು ಆಧುನೀಕರಣ ವಿರೋಧಿಯಾಗಿದೆ ಎಂದು ಅವರು ಲೇಖಕ ವಾಲ್ಟರ್ ರಸೆಲ್ ಮೀಡ್ ಅವರೊಂದಿಗಿನ ಚರ್ಚೆಯ ಸಂದರ್ಭದಲ್ಲಿ ಹೇಳಿದರು.

ಆದ್ದರಿಂದ ಪರವಾದದ್ದನ್ನು ಎತ್ತಿ ತೋರಿಸಲಾಗುವುದಿಲ್ಲ; ಬದಲಾಗಿ, ವಿರೋಧಿಯನ್ನು ಯಾವಾಗಲೂ ಪ್ರಚಾರ ಮಾಡಲಾಗಿದೆ ಕು ಕ್ಲುಕ್ಸ್ ಕ್ಲಾನ್‌ನ ಕೆಲವು ಭಾರತೀಯ ಆವೃತ್ತಿ, ಅದು ನಾವು ಅಲ್ಲ, ಎಂದು ಹೊಸಬಾಳೆ ಹೇಳಿದರು.

ಹಿಂದೂ ತತ್ವಶಾಸ್ತ್ರ ಮತ್ತು ಸಂಸ್ಕೃತಿಯು ಇಡೀ ಜಗತ್ತನ್ನು ಒಂದೇ ಕುಟುಂಬವೆಂದು ನೋಡುತ್ತದೆ ಮತ್ತು ಶ್ರೇಷ್ಠತೆಯನ್ನು ಬೆಂಬಲಿಸುವುದಿಲ್ಲ ಎಂದು ಅವರು ಹೇಳಿದರು.ನಾವು ಜೀವಂತ ಮತ್ತು ನಿರ್ಜೀವವಾದ ಎಲ್ಲದರಲ್ಲೂ ಏಕತೆಯನ್ನು ನೋಡುತ್ತೇವೆ. ಅದು ಹಿಂದೂಗಳ ಮೂಲ ತತ್ವವಾದಾಗ, ಶ್ರೇಷ್ಠತೆಯ ಸ್ವಭಾವದ ಪ್ರಶ್ನೆ ಉದ್ಭವಿಸುವುದಿಲ್ಲ. ಅಲ್ಲದೆ, ಇತಿಹಾಸದಲ್ಲಿ, ಹಿಂದೂಗಳು ಯಾವುದೇ ದೇಶವನ್ನು ಎಂದಿಗೂ ಆಕ್ರಮಿಸಿಲ್ಲ ಎಂದು ಹೊಸಬಾಳೆ ಹೇಳಿದರು.

ಸೇವಾ ಪ್ರಜ್ಞೆಯನ್ನು ತುಂಬಲು ಮತ್ತು ಸಾಮಾಜಿಕ ಸಾಮರಸ್ಯವನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಜೀವನ ಮೌಲ್ಯಗಳನ್ನು ಬೆಳೆಸಲು ಆರ್‌ಎಸ್‌ಎಸ್ ಶಾಖೆಗಳು ಎಂದು ಕರೆಯಲ್ಪಡುವ ಸುಮಾರು 83,000 ದೈನಂದಿನ ಸಭೆಗಳನ್ನು ನಡೆಸುತ್ತದೆ ಎಂದು ಹೊಸಬಾಳೆ ಹೇಳಿದರು.ಜೀವನದ ಪ್ರತಿಯೊಂದು ಹಂತ ಮತ್ತು ಎಲ್ಲಾ ವಯೋಮಾನದ ಜನರು ನಮ್ಮ ಸಂಘಟನೆಯ ಸ್ವಯಂಸೇವಕರಾಗಿದ್ದಾರೆ.

ಆರ್‌ಎಸ್‌ಎಸ್ ನೈಸರ್ಗಿಕ ವಿಕೋಪಗಳ ಸಮಯದಲ್ಲಿ ಪರಿಹಾರ ಕಾರ್ಯಗಳನ್ನು ಕೈಗೊಳ್ಳುತ್ತದೆ ಮತ್ತು ಶಿಕ್ಷಣ, ಆರೋಗ್ಯ, ಸ್ವರಕ್ಷಣೆ, ಗ್ರಾಮೀಣಾಭಿವೃದ್ಧಿ ಮತ್ತು ಪರಿಸರ ಸಮಸ್ಯೆಗಳಂತಹ ಕ್ಷೇತ್ರಗಳಲ್ಲಿಯೂ ಸಕ್ರಿಯವಾಗಿದೆ ಎಂದು ಅವರು ಹೇಳಿದರು.

ಸಾಂಸ್ಕೃತಿಕ ಮೌಲ್ಯಗಳು ಮತ್ತು ಆಧುನೀಕರಣವು ವಿರೋಧಾಭಾಸಗಳಲ್ಲ ಮತ್ತು ಕೆಲವು ಉದ್ವಿಗ್ನತೆಗಳು ಉದ್ಭವಿಸಬಹುದಾದರೂ ಸಹಬಾಳ್ವೆ ನಡೆಸಬಹುದು ಎಂದು ಅವರು ಹೇಳಿದರು.ಆಧುನೀಕರಣ ಮತ್ತು ಸಾಂಸ್ಕೃತಿಕ ಮೌಲ್ಯಗಳೆರಡೂ ಕಾಲಕ್ಕೆ ಅನುಗುಣವಾಗಿ ಹೊಂದಿಕೊಳ್ಳುವ ಅಗತ್ಯವಿದೆ. ಆಧುನೀಕರಣವು ಕೈಗಾರಿಕೀಕರಣ, ತಂತ್ರಜ್ಞಾನ ಮತ್ತು ವ್ಯಕ್ತಿವಾದಿ ಪ್ರವೃತ್ತಿಗಳನ್ನು ತರುತ್ತದೆಯಾದರೂ, ಅದು ಸಂಸ್ಕೃತಿ ಮತ್ತು ಸಾಂಸ್ಕೃತಿಕ ಮೌಲ್ಯಗಳ ಜೊತೆಗೆ ಕಾರ್ಯನಿರ್ವಹಿಸಬಹುದು ಎಂದು ಹೊಸಬಾಳೆ ಹೇಳಿದರು.

ಇತ್ತೀಚಿನ ದಶಕಗಳಲ್ಲಿ ಹಲವಾರು ಸಮಾಜಗಳಲ್ಲಿ ಸಂಸ್ಕೃತಿ ಮತ್ತು ಆಧುನಿಕತೆಯ ಸಹಬಾಳ್ವೆ ಗೋಚರಿಸುತ್ತಿದೆ ಎಂದು ಅವರು ಹೇಳಿದರು.ಹಿಂದೂ ಸಮಾಜವಾಗಲಿ, ಭಾರತೀಯ ಸಮಾಜವಾಗಲಿ, ಜಪಾನ್ ಅಥವಾ ಚೀನಾವಾಗಲಿ, ಎಲ್ಲರೂ ತಮ್ಮ ಸಾಂಸ್ಕೃತಿಕ ಮತ್ತು ನಾಗರಿಕ ಮೌಲ್ಯಗಳನ್ನು ಹಾಗೆಯೇ ಉಳಿಸಿಕೊಂಡು ಅವುಗಳಿಂದ ಸ್ಫೂರ್ತಿ ಪಡೆದು ಆಧುನೀಕರಣಗೊಂಡಿದ್ದಾರೆ. ಅದಕ್ಕಾಗಿಯೇ ಸಾಂಸ್ಕೃತಿಕ ಮೌಲ್ಯಗಳು ಮತ್ತು ಆಧುನೀಕರಣವು ವಿರುದ್ಧ ದಿಕ್ಕುಗಳಲ್ಲಿ ಎಳೆಯುತ್ತದೆ ಎಂದು ನಾನು ಭಾವಿಸುವುದಿಲ್ಲ ಎಂದು ಅವರು ಹೇಳಿದರು.

# ಡಾ.ರಾಜ್ ಹುಟ್ಟುಹಬ್ಬ : ರಾಜ್ಯದೆಲ್ಲೆಡೆ ಸಂಭ್ರಮ, ಪುಣ್ಯಭೂಮಿಯಲ್ಲಿ ಕುಟುಂಬಸ್ಥರಿಂದ ಪೂಜೆ



**ಬೆಂಗಳೂರು,ಏ.24–** ಪದಭೂಷಣ ಡಾ.ರಾಜ್‌ಕುಮಾರ್ ಅವರ ಹುಟ್ಟುಹಬ್ಬ ಸಂಭ್ರಮ ರಾಜ್ಯದೆಲ್ಲೆಡೆ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಅಭಿಮಾನಿಗಳೇ ದೇವರು ಎಂದು ಕರೆದ ಡಾ.ರಾಜ್‌ಕುಮಾರ್ ಅವರ ಕೋಟ್ಯಂತರ ಅಭಿಮಾನಿಗಳು ಇಂದು ಅವರ ಹುಟ್ಟುಹಬ್ಬಕ್ಕೆ ಹಲವು ಸೇವಾ ಕಾರ್ಯಗಳಲ್ಲಿ ತೊಡಗಿಕೊಂಡಿದ್ದು, ಅವರ ಹೆಸರಿನಲ್ಲಿ ಸಿಹಿ ಹಂಚಿ ಸಂಭ್ರಮಿಸಿದ್ದಾರೆ

ನಗರದ ಕಂಠೀರವ ಸ್ಟುಡಿಯೋ ಆವರಣದಲ್ಲಿರುವ ಡಾ.ರಾಜಕುಮಾರ್ ಪುಣ್ಯಭೂಮಿಗೆ ಇಂದು ತಂಡೋಪತಂಡವಾಗಿ ಆಗಮಿಸಿ ಅಭಿಮಾನಿಗಳು ಡಾ.ರಾಜ್ ಅವರ ಜಯಘೋಷಗಳನ್ನು ಕೂಗಿ ಅಭಿಮಾನ ಮೆರೆದರು.ಹಲವರು ರಕ್ತದಾನ ಮಾಡಿದರೆ, ಇನ್ನೂ ಕೆಲವರು ಅನ್ನದಾನ ಮಾಡುವ ಮೂಲಕ ತಮ ನೆಚ್ಚಿನ ನಾಯಕನನ್ನು ಸರಿಸಿದರು.
ಇಂದು ಬೆಳಿಗ್ಗೆ ಡಾ.ರಾಜಕುಮಾರ್ ಪುಣ್ಯಭೂಮಿಗೆ ರಾಘವೇಂದ್ರ ರಾಜ್‌ಕುಮಾರ್, ಲಕ್ಷ್ಮಿ, ಡಾ.ರಾಜ್ ಕುಟುಂಬದ ಸದಸ್ಯರು, ಶಾಸಕ ಗೋಪಾಲಯ್ಯ, ಮಾಜಿ ಶಾಸಕ ನೆ.ಲ.ನರೇಂದ್ರ ಬಾಬು ಸೇರಿದಂತೆ ಹಲವರು ಭೇಟಿ ನೀಡಿ ಪೂಜೆ ಸಲ್ಲಿಸಿದರು.
ಈ ವೇಳೆ ವಿನಯ್‌ರಾಜ್‌ಕುಮಾರ್ ಸುದ್ದಿಗಾರರೊಂದಿಗೆ ಮಾತನಾಡಿ ಡಾ.ರಾಜ್‌ಕುಮಾರ್‌ರವರಿಗೆ ಭಾರತರತ್ನ ನೀಡಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು. ಅಪ್ಪಾಜಿಯವರಿಗಿದ್ದ ಸರಳತೆ ಮತ್ತು ಸಮಾಜದ ಮೇಲಿದ್ದ ಅವರ ಕಾಳಜಿ ಎಂದಿಗೂ ಮರೆಯುವಂತಿಲ್ಲ.ಕನ್ನಡಿಗರು ಸೇರಿದಂತೆ ಅಸಂಖ್ಯಾತ ಅಭಿಮಾನಿಗಳು ಅವರನ್ನು ಆರಾಧ್ಯ ದೈವ ಎಂದು ಪೂಜಿಸುವುದು ನೋಡಿದರೆ ನನಗೆ ರೋಮಾಂಚನವಾಗುತ್ತದೆ ಎಂದು ಹೇಳಿದರು. ಚಿಕ್ಕವನಾಗಿದ್ದಾಗ ನನಗೆ ಹೇಳಿಕೊಟ್ಟ ಸಂಸ್ಕಾರ ಮರೆಯುವಂತಿಲ್ಲ ಎಂದು ಅವರು ಸರಿಸಿದರು.
ಇದೇ ವೇಳೆ ರಾಜ್ಯದ ನಾನಾ ಕಡೆಗಳಿಂದ ಬಂದಿದ್ದ ಅಭಿಮಾನಿಗಳು ಹೂವಿನ ಹಾರ, ಹೂಗುಚ್ಛಗಳನ್ನು ಡಾ.ರಾಜ್ ಸಮಾಧಿಗಿಟ್ಟು ನಮಿಸಿದರು. ಬೆಳಿಗ್ಗೆಯಿಂದಲೇ ಚಿತ್ರರಂಗದ ನಟ–ನಟಿಯರು ಸೇರಿದಂತೆ ಹಲವು ರಾಜಕೀಯ ಮುಖಂಡರು ಭೇಟಿ ನೀಡಿ ನೆಚ್ಚಿನ ನಾಯಕರಿಗೆ ನಮನ ಸಲ್ಲಿಸಿದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE